ವಿಜಯಪುರ | ಸಂಪುಟ 01 | ಸಂಚಿಕೆ 296 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com | Title Code: KARKAN28047 | ಶನಿವಾರ, ಜನವರಿ 20, 2024

“ಸಂವಿಧಾನಗಳು ವಚನ ಸಾಹಿತ್ಯದ ಮೇಲೆ ನಿಂತಿವೆ. ನಾವು ಬಸವ ನಾಡಿನಲ್ಲಿ ಹುಟ್ಟಿದವರು, ಬಸವಣ್ಣನವರು ನಡೆದಾಡಿದ ಭೂಮಿಯಲ್ಲಿ ಬದುಕು ಕಟ್ಟಿಕೊಂಡವರು ಎನ್ನುವುದು ನಾವೆಲ್ಲ ಸದಾಕಾಲ ಅಭಿಮಾನ ಪಡುವ ಸಂಗತಿ.”



– ಸಂಗಮೇಶ ಬಬಲೇಶ್ವರ

ಮುಖ್ಯ ವಕ್ತಾರರು, ಕೆಪಿಸಿಸಿ ಪ್ರಚಾರ ಸಮಿತಿ

### ಕಾಂಗ್ರೆಸ್ ಬಲವಾದ ವಿರೋಧ | ಸಮಿತಿ ವಿಸರ್ಜನೆಗೆ ಕೋರಿಕೆ | ಸಂಸದೀಯ ಪ್ರಜಾಪ್ರಭುತ್ವ ಬುಡಮೇಲು

# ’ಒಂದು ರಾಷ್ಟ್ರ–ಒಂದು ಚುನಾವಣೆ’ ಪ್ರಜಾಪ್ರಭುತ್ವ ವಿರೋಧಿ!

### ಮಾಜಿ ರಾಷ್ಟ್ರಪತಿ ಕೋವಿಂದ್ ನೇತೃತ್ವದ ಸಮಿತಿಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪತ್ರ

ನವದೆಹಲಿ: ಒಂದು ರಾಷ್ಟ್ರ ಒಂದು ಚುನಾವಣೆ ಪರಿಕಲ್ಪನೆಯನ್ನು ಕಾಂಗ್ರೆಸ್ ಬಲವಾಗಿ ವಿರೋಧಿಸಿದ್ದು, ಇದು ಪ್ರಜಾಪ್ರಭುತ್ವ ಮತ್ತು ಒಕ್ಕೂಟ ವ್ಯವಸ್ಥೆಗೆ ವಿರುದ್ಧವಾಗಿದೆ ಎಂದಿದೆ.

ಒಂದು ರಾಷ್ಟ್ರ, ಒಂದು ಚುನಾವಣೆಯ ಸಾಧ್ಯತೆಯ ಬಗ್ಗೆ ಪರಿಶೀಲಿಸಲು ರಚಿಸಿರುವ ಮಾಜಿ ರಾಷ್ಟ್ರಪತಿ ರಾಮ್‌ನಾಥ್ ಕೋವಿಂದ್ ನೇತೃತ್ವದ ಸಮಿತಿಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪತ್ರ ಬರೆದಿದ್ದು, ಸಮಿತಿಯನ್ನು ವಿಸರ್ಜಿಸುವಂತೆ ಕೋರಿದ್ದಾರೆ.

ಸಂವಿಧಾನ ಮತ್ತು ಸಂಸದೀಯ ಪ್ರಜಾಪ್ರಭುತ್ವವನ್ನು ಬುಡಮೇಲು ಮಾಡುವುದರೊಂದಿಗೆ ಮಾಜಿ ರಾಷ್ಟ್ರಪತಿಗಳ ಕಚೇರಿಯನ್ನು ದುರುಪಯೋಗಪಡಿಸಿಕೊಳ್ಳಲು ಕೇಂದ್ರ ಸರ್ಕಾರಕ್ಕೆ ಅವಕಾಶ ನೀಡದಂತೆ ಕೋವಿಂದ್ ಅವರಿಗೆ ಕಾಂಗ್ರೆಸ್ ಮನವಿ ಮಾಡಿದೆ.

‘ಒಂದು ರಾಷ್ಟ್ರ ಒಂದು ಚುನಾವಣೆ’ ಕುರಿತ ಕೇಂದ್ರದ ಉನ್ನತ ಮಟ್ಟದ ಸಮಿತಿಯ ಕಾರ್ಯದರ್ಶಿ ಡಾ.ನಿತಿನ್ ಚಂದ್ರ ಅವರಿಗೆ ಬರೆದ ನಾಲ್ಕು ಪುಟಗಳ ಪತ್ರದಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಮಿತಿಯ ರಚನೆ ಮತ್ತು ಲೋಕಸಭೆಯ ಅವಧಿಪೂರ್ವ ವಿಸರ್ಜನೆಯಿಂದ ಹಿಡಿದು ಹಲವು ವಿಷಯಗಳನ್ನು ಒತ್ತಿ ಹೇಳಿದ್ದಾರೆ.

ಅಕ್ಟೋಬರ್ 18ರಂದು ಸಮಿತಿಯ ಕಾರ್ಯದರ್ಶಿ ನಿತಿನ್ ಚಂದ್ರ ಅವರು ಸಮಿತಿಯ ಪರಿಗಣನೆಗಾಗಿ ಸಲಹೆಗಳನ್ನು ಆಹ್ವಾನಿಸಿದ ನಂತರ ಖರ್ಗೆಯವರು ಪತ್ರ ಬರೆದಿದ್ದಾರೆ. ಸಮಿತಿಯು ಈಗಾಗಲೇ ಯೋಜನೆ ಬಗ್ಗೆ ಮನಸ್ಸು ಮಾಡಿದೆ ಕಣ್ಣೊರೆಸುವ ಸಲುವಾಗಿ ಸಲಹೆಗಳನ್ನು ಆಹ್ವಾನಿಸಲಾಗಿದೆ ಎಂದು ಪತ್ರದಲ್ಲಿ ತಿಳಿಸಲಾಗಿದೆ.

ಹಲವು ರಾಜ್ಯ ಸರ್ಕಾರಗಳಿರುವ ವಿರೋಧ ಪಕ್ಷಗಳಿಗೆ ಗಣನೀಯ



ಪ್ರಾಮುಖ್ಯತೆ ನೀಡದೆ ಸಮಿತಿಯನ್ನು ರಚಿಸಿರುವುದು ಪಕ್ಷಪಾತದಿಂದ ಕೂಡಿದೆ. ಕೇಂದ್ರದಲ್ಲಿದ್ದ ಒಂದು ಪಕ್ಷವು ಪಕ್ಷಾಂತರ ವಿರೋಧ ಕಾನೂನನ್ನು ದುರ್ಬಲಗೊಳಿಸಿ ಅನೈತಿಕ ರಾಜಕಾರಣ ನಡೆಸಿದ ಪರಿಣಾಮ ಕಳೆದ 10 ವರ್ಷಗಳಲ್ಲಿ ಅನೇಕ ಮುಖ್ಯಮಂತ್ರಿಗಳು ಅಧಿಕಾರ ಕಳೆದುಕೊಂಡಿರುವ ನಿದರ್ಶನಗಳಿವೆ ಎಂದು ಹೇಳಿದ್ದಾರೆ.

## ಬಸವಣ್ಣ ವಿಶ್ವದ ಸಾಂಸ್ಕೃತಿಕ ನಾಯಕರು :ಬಬಲೇಶ್ವರ

ಉದಯರಶ್ಮಿ ನ್ಯೂಸ್

ವಿಜಯಪುರ: ಮಹಾ ಮಾನವತಾವಾದಿ, ಸಮಾಜ ಸುಧಾರಣೆಯ ಮಹಾನಾಯಕ ವಿಶ್ವಗುರು ಬಸವಣ್ಣನವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕರೆಂದು ಘೋಷಣೆ ಮಾಡಿರುವುದು, ಕರ್ನಾಟಕ ರಾಜ್ಯ ಸರ್ಕಾರದ ಐತಿಹಾಸಿಕ ನಿರ್ಧಾರವಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಹಾಗೂ ಸಚಿವರಾದ ಶರಣ ಶ್ರೀ ಎಂ ಬಿ ಪಾಟೀಲ ಹಾಗೂ ಸಂಪುಟದ ಎಲ್ಲ ಸಚಿವರಿಗೆ, ಶಾಸಕರಿಗೆ, ನಾಡಿನ ಸಮಸ್ತ ಮಠಾಧೀಶರಿಗೆ, ಸಮಸ್ತ ಬಸವಾಭಿಮಾನಿಗಳ ಪರವಾಗಿ ತುಂಬು ಹೃದಯದ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ ಎಂದು ಕೆಪಿಸಿಸಿ ಪ್ರಚಾರ ಸಮಿತಿಯ ಮುಖ್ಯ ವಕ್ತಾರ ಸಂಗಮೇಶ ಬಬಲೇಶ್ವರ ಹೇಳಿದ್ದಾರೆ.

ಶುಕ್ರವಾರ ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ ಅವರು, ವಿಶ್ವಗುರು ಬಸವಣ್ಣನವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕರೆಂದು ಘೋಷಣೆ ಮಾಡಿರುವುದರ ಜೊತೆಗೆ ಅವರ ವಚನ ಸಾಹಿತ್ಯ ಚಿಂತನೆಗಳನ್ನು, ಮನೆ ಮನಗಳಿಗೆ ತಲುಪಿಸುವ ಕೆಲಸ ಸರ್ಕಾರ ಮಾಡಲಿದೆ ಎಂದು ಹೇಳಿರುವ ನೈಜ ಬಸವಾನುಯಾಯಿ ಸಿದ್ದರಾಮಯ್ಯನವರಿಗೆ ತುಂಬು ಹೃದಯದ ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ಕಲೆ, ಸಾಹಿತ್ಯ, ಸಂಗೀತ, ರಾಜಕೀಯ, ಸಾಮಾಜಿಕ, ಆರ್ಥಿಕ ಹೀಗೆ ಎಲ್ಲ ಕ್ಷೇತ್ರಗಳಲ್ಲಿ ಅದ್ಭುತ



ಸಾಧನೆ ಮಾಡಿದ ಮಹಾತ್ಮ ವಿಶ್ವಗುರು ಬಸವಣ್ಣನವರು. ಅವರು ಬರೀ ಕರ್ನಾಟಕದ ಸಾಂಸ್ಕೃತಿಕ ನಾಯಕರಲ್ಲ, ವಿಶ್ವದ ಸಾಂಸ್ಕೃತಿಕ ನಾಯಕರು ಎನ್ನುವುದರಲ್ಲಿ ಎರಡು ಮಾತಿಲ್ಲ. ಜಗತ್ತಿನ ಎಲ್ಲಾ ಸಂವಿಧಾನಗಳು ವಚನ ಸಾಹಿತ್ಯದ ಮೇಲೆ ನಿಂತಿವೆ. ನಾವು ಬಸವ ನಾಡಿನಲ್ಲಿ ಹುಟ್ಟಿದವರು, ಬಸವಣ್ಣನವರು ನಡೆದಾಡಿದ ಭೂಮಿಯಲ್ಲಿ ಬದುಕು ಕಟ್ಟಿಕೊಂಡವರು ಎನ್ನುವುದು ನಾವೆಲ್ಲ ಸದಾಕಾಲ ಅಭಿಮಾನ ಪಡುವ ಸಂಗತಿ ಎಂದು ಸಂಗಮೇಶ ಬಬಲೇಶ್ವರ ತಿಳಿಸಿದ್ದಾರೆ.

ಪ್ರಾಥಮಿಕ ಶಾಲಾ ಹಂತದಿಂದ ಪದವಿಯವರೆಗೆ ಬಸವಣ್ಣನವರ ವಚನ ಸಾಹಿತ್ಯವನ್ನು ವಿದ್ಯಾರ್ಥಿಗಳ ಪಾಠಗಳಲ್ಲಿ ಅಳವಡಿಸುವುದು ಇಂದಿನ ತುರ್ತು ಅಗತ್ಯವಾಗಿದೆ. ಅದನ್ನು ಎಲ್ಲಾ ಹಂತದಲ್ಲಿಯೂ ರಾಜ್ಯ ಸರ್ಕಾರ ಮಾಡಲು ಮುಂದಾಗಿರುವುದು ನಮ್ಮೆಲ್ಲರಿಗೂ ಸಂತೋಷವನ್ನುಂಟು ಮಾಡಿದೆ ಎಂದು ಅವರು ಹೇಳಿದ್ದಾರೆ.

## ಬಸವೇಶ್ವರರು ಸಾಂಸ್ಕೃತಿಕ ನಾಯಕ :ಅಭಿಮಾನಿಗಳ ಹರ್ಷ

ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಬಸವ ಸೇವಾ ಸಮಿತಿ ನೇತೃತ್ವದಲ್ಲಿ ವಿವಿಧ ಮುಖಂಡರು ಶುಕ್ರವಾರ ಸಂಜೆ ರಾಜ್ಯ ಸರ್ಕಾರ ರಾಜ್ಯದ ಸಾಂಸ್ಕೃತಿಕ ನಾಯಕ ಬಸವೇಶ್ವರರೆಂದು ನಿರ್ಣಯ ಮಾಡಿದ್ದನ್ನು ಸ್ವಾಗತಿಸಿ ಸಂಭ್ರಮಾಚರಣೆ ಮಾಡಿದರು.




ಈ ಸಂದರ್ಭದಲ್ಲಿ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ, ಮುಖಂಡರಾದ ಈರಣ್ಣ ಪಟ್ಟಣಶೆಟ್ಟಿ, ಎಂ.ಜಿ.ಆದಿಗೊಂಡ, ಎಚ್.ಎಸ್.ಬಿರಾದಾರ ಮಾತನಾಡಿ, ಇಡೀ ಜಗತ್ತಿಗೆ ಸಾಂಸ್ಕೃತಿಕ, ಸಾಮಾಜಿಕ ಹಾಗೂ ರಾಜಕೀಯ ಚಿಂತನೆಗಳಿಗೆ ಹೊಸ ದಿಕ್ಕನ್ನು ತೋರಿಸಿದ ವಚನ ಚಳವಳಿಯ ನಾಯಕತ್ವವನ್ನು ವಹಿಸಿದ್ದ ಬಸವೇಶ್ವರರನ್ನು ಕರ್ನಾಟಕ ರಾಜ್ಯದ ಸಾಂಸ್ಕೃತಿಕ ನಾಯಕರೆಂದು ಸಚಿವ ಸಂಪುಟ ನಿರ್ಣಯ ಕೈಗೊಂಡಿರುವುದು ಸಮಸ್ತ ಬಸವಾಭಿಮಾನಿಗಳಿಗೆ ಹರ್ಷ ಉಂಟು ಮಾಡಿದೆ. ಇದರಿಂದಾಗಿ ಬಸವೇಶ್ವರರು ಜನಿಸಿದ ಬಸವನಬಾಗೇವಾಡಿಯ ಗರಿಮೆ ಹೆಚ್ಚಿದಂತಾಗಿದೆ. ಈ ನಿರ್ಣಯ ತೆಗೆದುಕೊಂಡ ರಾಜ್ಯದ ಸಿಎಂ ಸಿದ್ದರಾಮಯ್ಯನವವರು ಸೇರಿದಂತೆ ಸಚಿವರಿಗೆ ಅಭಿನಂದನೆಗಳನ್ನು ತಿಳಿಸಿದ ಅವರು, ಮುಂಬರುವ ದಿನಗಳಲ್ಲಿ ಕೇಂದ್ರ ಸರ್ಕಾರವು ಬಸವೇಶ್ವರರನ್ನು ದೇಶದ ಸಾಂಸ್ಕೃತಿಕ ರಾಯಭಾರಿಯನ್ನಾಗಿ ಘೋಷಣೆ ಮಾಡಬೇಕೆಂದು ಆಶಯ ವ್ಯಕ್ತಪಡಿಸಿದರು.

ಸಂಭ್ರಮಾಚರಣೆಯಲ್ಲಿ ಎಸ್.ಆರ್. ಕಲ್ಲೂರ, ಬಸವರಾಜ ಹಾರಿವಾಳ, ಸಿ.ಎಸ್.ಪಾಟೀಲ, ಸುಭಾಸ ಚಿಕ್ಕೊಂಡ, ರವಿ ರಾಠೋಡ ಸಂಕನಗೌಡ ಪಾಟೀಲ, ಶೇಖರ ಗೊಳಸಂಗಿ, ಸುರೇಶ ಹಾರಿವಾಳ, ಸಂಗಮೇಶ ಓಲೇಕಾರ, ಅನಿಲ ಅಗರವಾಲ, ಡಾ.ಪುರಾಣಿಕಮಠ, ಈರಣ್ಣ ವಂದಾಲ, ಗಣೇಶ ಬಿರಾದಾರ, ರಾಜು ಮೋದಿ, ಡಾ.ಎಸ್.ಆರ್.ಮಠ, ವೆಂಕಟೇಶ ಚಿಕ್ಕೊಂಡ, ಉಮೇಶ ಹಾರಿವಾಳ, ಈರಬಸಪ್ಪ ಆದಿಗೊಂಡ, ರಮೇಶ ಯಳಮೇಲಿ, ಸುರೇಶಗೌಡ ಪಾಟೀಲ, ಆರ್.ಜಿ.ಅಳ್ಳಗಿ, ಎಸ್.ಕೆ.ಸೋಮನಕಟ್ಟಿ ಇತರರು ಭಾಗವಹಿಸಿದ್ದರು.

### ರಾಜ ನುಡಿ

ನಾವು ಹುಟ್ಟಿ ಬಂದು ಇನ್ನೂ ಬದುಕಿರುವೆವು ಎಂದಾದರೆ ಪ್ರಕೃತಿ ನಮ್ಮನ್ನು ಆಯ್ಕೆ ಮಾಡಿ, ಅವಕಾಶ ಕೊಟ್ಟಿದೆ ಎಂದರ್ಥ ಸರ್ವಾಧಿಕಾರ ಕೊಟ್ಟಿದೆ ಎಂದರ್ಥವಲ್ಲ. ದೇವರೆಂಬ ಅಂತಿಮ ಸರ್ವಾಧಿಕಾರಿ ಮೇಲೊಬ್ಬ ಇದ್ದಾನೆ.

–ಡಾ. ರಾಜಶೇಖರ ನಾಗೂರ



### ವಚನ ಚಿಂತನ 282

ಇಷ್ಟಲಿಂಗ ಜನಕ ಬಸವಣ್ಣನವರು

*ಎನ್ನ ಕರಸ್ಥಲದ ಲಿಂಗವ ಅನಿಮಿಷ ಕೊಂಡನು,*
*ಅನಿಮಿಷನ ಕರಸ್ಥಲದ ಲಿಂಗವ ನೀವು ಕೊಂಡಿರಿ.*
*ನಿಮ್ಮ ಕರಸ್ಥಲವೆ ಪರಸ್ಥಲವಾಯಿತ್ತು,*
*ಕುರುಹಳಿದಲ್ಲಿ ಕುರುಹ ಕೊಂಬ ಪರಿ ಎಂತಯ್ಯಾ*
*ಕೊಡುವವರು ಕೊಂಬವರೊಳಗೆ ಸಿಲುಕಿದ ಬಳಿಕ*
*ಕೂಡಲಸಂಗಮದೇವಪ್ರಭುವೆ,*
*ನಿಮ್ಮ ಕರಸ್ಥಲದ ಲಿಂಗವೆನಗೆ ಸಾಧ್ಯವಹ ಪರಿಯೆಂತಯ್ಯಾ*

*– ಬಸವಣ್ಣನವರು*

ಈ ವಚನದಲ್ಲಿ ಇಷ್ಟಲಿಂಗ ಜನಕ ಬಸವಣ್ಣನವರು ಒಂದು ಐತಿಹಾಸಿಕ ಸತ್ಯವನ್ನು ನಮ್ಮೆದುರಿಗೆ ಬಿಚ್ಚಿಟ್ಟಿದ್ದಾರೆ, ಬಸವಣ್ಣನವರ ಪರಿಕಲ್ಪನೆಯ ಇಷ್ಟಲಿಂಗವನ್ನೇ ಅನಿಮಿಷರು ಪೂಜಿಸಿದ್ದರು, ಅದೇ ಲಿಂಗವನ್ನು ಅಲ್ಲಮಪ್ರಭುಗಳು ಅನಿಮಿಷರಿಂದ ಪಡೆದಿರುವರು. ಇಷ್ಟಲಿಂಗವೆಂಬ ಕುರುಹಿನ ಮೂಲಕ ಅರಿವನ್ನು ಅರಿತಮೇಲೆ ಕುರುಹು ಅಳಿದುಹೋಗುತ್ತದೆ. ಕಾರಣ ಮರಳಿ ತಾವು ಅಲ್ಲಮರಿಂದ ಕುರುಹು ಪಡೆಯದೆ ಅರುಹು ಪಡೆದಿರುವುದಾಗಿ ತಿಳಿಸಿದ್ದಾರೆ. ಅರಿವುಳ್ಳವರಿಂದ ಅರಿವು ಪಡೆಯುವ ಪ್ರಕ್ರಿಯೆಯಲ್ಲಿ ಕೊಡುವವ ಕೊಂಬುವವ ಎಂಬ ಉಬಯ ಬೇಧವಿರುವುದಿಲ್ಲ. ಅಂದಿನ ಶೂನ್ಯಸಿಂಹಾಸನಾಧಿಪತಿಯಾದ ಅಲ್ಲಮರಿಂದ ಬಸವಣ್ಣನವರು ಲಿಂಗವನ್ನು (ಅರಿವು)ಪಡೆದು ಸಂತಸಗೊಂಡಿರುವರು.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

### ಲಿಂಬೆ ನಾಡಿನಲ್ಲಿ ರಾಮನಾಮ ಜಪ | ಶರವೇಗದಲ್ಲಿ ಸಾಗುತ್ತಿರುವ ಮಂತ್ರಾಕ್ಷತೆ ಕಾರ್ಯ

# ರಾಮ ಮಂದಿರ: ಹೊಸ ಧಾರ್ಮಿಕ ಚಿಂತನೆಗೆ ನಾಂದಿ

ಉದಯರಶ್ಮಿ ನ್ಯೂಸ್

– ಶಂಕರಲಿಂಗ ಜಮಾದಾರ


ಇಂಡಿ: ಭಾರತದ ಸನಾತನ ಯಾತ್ರೆಯಲ್ಲಿ ಹಿಂದೂ ಧರ್ಮದ ಧಾರ್ಮಿಕ, ಸಾಂಸ್ಕೃತಿಕ ಚರಿತ್ರೆಯ ಇತಿಹಾಸದಲ್ಲಿ ದೇವತಾ ಪುರುಷರಾಗಿರುವ ಪ್ರಭು ಶ್ರೀರಾಮಚಂದ್ರರ ಪ್ರಾಣ ಪ್ರತಿಷ್ಠಾನ ಸಮಾರಂಭ ಅಯೋಧ್ಯೆಯಲ್ಲಿ ಜರಗುತ್ತಿರುವ ಪ್ರಯುಕ್ತ ಲಿಂಬೆ ನಾಡಿನಲ್ಲಿ ಮಂತ್ರಾಕ್ಷತೆ ಹಂಚುವ ಪವಿತ್ರ ಕಾರ್ಯ ಅತ್ಯಂತ ಸಡಗರ–ಸಂಭ್ರಮದಿಂದ ನಡೆಯುತ್ತಿದೆ.



ಭವಿಷ್ಯದ ಜಿಲ್ಲಾ ಕೇಂದ್ರ ಎಂದು ಬಿಂಬಿತಗೊಂಡು, ಸದ್ಯ ಪ್ರತ್ಯೇಕ ಜಿಲ್ಲಾ ಕೇಂದ್ರಕ್ಕಾಗಿ ಅತೀ ಹೆಚ್ಚು ಪ್ರತಿಭಟನೆ ನಡೆಸುತ್ತಿರುವ ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕಿನಲ್ಲಿ ಅತ್ಯಂತ ವೈಶಿಷ್ಟ್ಯದಿಂದ ಮಂತ್ರಾಕ್ಷತೆ ಹಂಚುವ ಮತ್ತು ಸ್ವೀಕರಿಸುವ ಕಾರ್ಯ ಅದ್ದೂರಿಯಿಂದ ನಡೆಯುತ್ತಿದೆ.

ಭೀಮಾತೀರದಲ್ಲಿ ರಾಮನಪೂಜೆ ರಾಜ್ಯದಲ್ಲಿಯೇ ಲಿಂಬೆನಾಡು ಭೀಮಾ ತೀರ ಎಂದೇ ಪ್ರಖ್ಯಾತಿ ಹೊಂದಿರುವ ಇಂಡಿಯ ಪ್ರತಿ ಮನೆ ಮನೆಯಲ್ಲೂ ಅತ್ಯಂತ ಸಡಗರ–ಸಂಭ್ರಮದೊಂದಿಗೆ ಶ್ರೀರಾಮನ ಭಾವಚಿತ್ರ, ಕರಪತ್ರ ಹಾಗೂ ಮಂತ್ರಾಕ್ಷತೆ ಕಾರ್ಯ ಸ್ವೀಕರಿಸುವಲ್ಲಿ, ಅದರಲ್ಲೂ ವಿಶೇಷವಾಗಿ ಗೃಹಣಿಯರು ಅರಿಶಿಣ, ಕುಂಕುಮ ಹಚ್ಚಿ ಮತ್ತು ಮಂಗಳರಾತಿ ಬೆಳಗಿ ಮಂತ್ರಾಕ್ಷತೆ ಸ್ವೀಕರಿಸುತ್ತಿರುವ ವಿಶೇಷ ಸ್ಮರಣಿಯ ಘಳಿಗೆಯಾಗಿ, ಹೃದಯಸ್ಪರ್ಶಿ ಮಂತ್ರಾಕ್ಷತೆ ವಿತರಿಸುವ, ಸ್ವೀಕರಿಸುವ ಕಾರ್ಯ ಸಡಗರದಿ ನಡೆಯುತ್ತಿದೆ.

ಇಂದು ವಿಶ್ವವೇ ಭಾರತದ ನರೇಂದ್ರ ಮೊದಿ ಅವರ ಆಧ್ಯಾತ್ಮಿಕ ಧಾರ್ಮಿಕ ವೈಜ್ಞಾನಿಕ ಚಿಂತನೆಗಳಿಗಾಗಿ ಬೆರಗಾಗಿ ನೋಡುತ್ತಿದೆ. ಕಾಶಿ, ಸೋಮನಾಥ ದೇವಾಲಯಗಳ ಜೀರ್ಣೋದ್ಧಾರ ಮಾಡಿದ್ದ ಅಹಲ್ಯಾಬಾಯಿ ಹೊಳ್ಕರ ಅವರ ನಂತರ ನರೇಂದ್ರ ಮೋದಿ ರಾಮಲಲ್ಲಾ ಪ್ರಾಣ ಪ್ರತಿಷ್ಠಾಪನ ಮಾಡುತ್ತಿರುವುದು ಈ ಯುಗದ ಸೌಭಾಗ್ಯದ ಸಂಕೇತ. ಇದು ಭಾರತೀಯ ನಾಗರಿಕರ ಹೆಮ್ಮೆಯ ಸಂಗತಿ.



**– ಕಾಸುಗೌಡ ಬಿರಾದಾರ,**

ಬಿಜೆಪಿ ರೈತ ಮೋರ್ಚಾ ಜಿಲ್ಲಾ ಅಧ್ಯಕ್ಷರು, ಇಂಡಿ

#### ಕೋಟ್ಯಂತರ ಹಿಂದೂಗಳ ಕನಸು ನನಸಾಗುವ ಸಮಯ

ಕೋಟ್ಯಂತರ ಹಿಂದೂಗಳ ಕನಸು ನನಸಾಗುವ ಸಮಯ ಸನ್ನಿಹಿತವಾಗಿದೆ. ಕೋಟ್ಯಂತರ ಭಕ್ತರು ಈಗಾಗಲೇ ಅಯೋಧ್ಯೆಯ ರಾಮ ಮಂದಿರ ನಿರ್ಮಾಣಕ್ಕೆ ನಾನಾ ರೀತಿಯ ಕೊಡುಗೆ ನೀಡಿದ್ದಾರೆ. ಈಗ ರಾಮಮಂದಿರ ನಿರ್ಮಾಣಕ್ಕೆ ಕಾಣಿಕೆ ನೀಡಿರುವವರ ಮನೆಬಾಗಿಲಿಗೆ ಪ್ರಸಾದ ತಲುಪಬೇಕು. ಈ ನಿಟ್ಟಿನಲ್ಲಿ ಪ್ರತಿಯೊಬ್ಬರ ಮನೆಗೂ ರಾಮದೇವರ ಪ್ರಸಾದವನ್ನು ತಲುಪಿಸುವ ಹಿತದೃಷ್ಟಿಯಿಂದ ಪ್ರತಿ ಊರು, ಗ್ರಾಮಗಳಿಗೂ ಮಂತ್ರಾಕ್ಷತೆ, ಭಾವಚಿತ್ರ ತಲುಪಿಸುವ ವ್ಯವಸ್ಥೆಯನ್ನು ಅತ್ಯಂತ ಭಕ್ತಿಪೂರ್ವಕ ಮಾಡಲಾಗಿದೆ ಎಂದು ರಾಮ ಭಕ್ತರು ನುಡಿಯುತ್ತಾರೆ.

ಇಂಡಿ ಪಟ್ಟಣದಲ್ಲಿ 23 ವಾರ್ಡಗಳ ಸಹಿತ ಒಟ್ಟು 28 ಮಂಡಲ, 7 ಹೋಬಳಿ, 143 ಗ್ರಾಮ ಒಟ್ಟು ವಸತಿ 430 ಪ್ರದೇಶದಲ್ಲಿ ಬೇಟಿ ನೀಡುವ ಪ್ರಕ್ರಿಯೆ ನಡೆದಿದ್ದು, ಈಗಾಗಲೇ ಸುಮಾರು 46 ಸಾವಿರ ಕರಪತ್ರ ಮತ್ತು ಶ್ರೀರಾಮಚಂದ್ರನ ಭಾವಚಿತ್ರ ಹಂಚಿಕೆ ಮಾಡಲಾಗಿದೆ. ಸುಮಾರು 55 ಸಾವಿರಕ್ಕಿಂತಲೂ ಹೆಚ್ಚಿನ ಜನರಿಗೆ ಮಂತ್ರಾಕ್ಷತೆ ವಿತರಿಸಲಾಗಿದೆ. ಇನ್ನು ತಾಲ್ಲೂಕಿನಲ್ಲಿ ಲಕ್ಷಕ್ಕಿಂತಲೂ ಹೆಚ್ಚಿನ ಜನರು ಮಂತ್ರಾಕ್ಷತೆ ನಿರೀಕ್ಷೆಯಲ್ಲಿದ್ದಾರೆ.

ಒಟ್ಟಾರೆಯಾಗಿ ಮಂತ್ರಾಕ್ಷತೆ ರೂಪದಲ್ಲಿ ದೇವರೇ ಮನೆಗೆ ಬರಲಿದ್ದಾರೆ. ಅದನ್ನು ಪ್ರಜ್ಞಾಪೂರ್ವಕವಾಗಿ ಪೂಜೆ ಮಾಡುವ ಪ್ರತಿಜ್ಞೆ ಮಾಡಬೇಕು. ಜ.22ರಂದು ಪ್ರತೀ ಗ್ರಾಮದಲ್ಲಿ ರಾಮ ಸೀಯಾರಾಮ ಭಜನೆ ಹಾಡುಗಳನ್ನು ಹಾಡಬೇಕು. ಸಂಜೆ 5 ಗಂಟೆಗೆ ಜ್ಯೋತಿ ಬೆಳಗಿ ಉತ್ತರ ದಿಕ್ಕಿಗೆ ಆರತಿ ಬೆಳಗುವ ಮೂಲಕ ಇದನ್ನು ಅವಿಸ್ಮರಣೀಯ ದಿನವನ್ನಾಗಿಸಬೇಕು ಎಂದು ಕಾರ್ಯಕರ್ತರು ತಿಳಿಸುತ್ತಿದ್ದಾರೆ.

ರಾಜ್ಯಾಂಗ, ನ್ಯಾಯಾಂಗ ಕಾರ್ಯಾಂಗದ ಮೂಲಕ ದೇಶದ ಕೋಟ್ಯಾಂತರ ಭಕ್ತರ ಆಶಯದೊಂದಿಗೆ ಇದೆ ಜ.22 ರಂದು ದೇಶದ ಪ್ರಧಾನಿ ನರೇಂದ್ರ ಮೋದಿ ಅವರಿಂದ ಅಯೋಧ್ಯೆ ರಾಮಲಲ್ಲಾ ವಿಗ್ರಹ ಪ್ರಾಣ ಪ್ರತಿಷ್ಠಾಪನವಾಗುತ್ತಿರುವ ಸಮಯದಲ್ಲಿ ಜನರಲ್ಲಿ ಭಯ–ಭಕ್ತಿ ಮೂಡುತ್ತಿದೆ. ದೇಶಾದ್ಯಂತ ನಡೆಯುತ್ತಿರುವ ಈ ಮಂತ್ರಾಕ್ಷತೆ ಕಾರ್ಯಕ್ರಮಕ್ಕೆ ಇಂಡಿಯ ಜನರು ಸಂಪೂರ್ಣವಾಗಿ ಭಕ್ತಿಪೂರ್ವಕ ಪೂಜ್ಯ ಭಾವನೆಯಿಂದ ಸ್ಪಂದನೆಯಾಗುತ್ತಿದ್ದು, ಅದು ಈ ಯುಗದ ಹೊಸ ಧಾರ್ಮಿಕ ಚಿಂತನೆಗೆ ನಾಂದಿ ಹಾಡಿದೆ. ಸಾವಿರಾರು ಕರಸೇವಕರ ತ್ಯಾಗ ಬಲಿದಾನಗಳಿಂದ ಹಾಗೂ ಕೋಟ್ಯಾಂತರ ಜನರ ಸಂಕಲ್ಪದೊಂದಿಗೆ ಈ ಸಮಾರಂಭ ನೇರವೇರುತ್ತಿರುವುದು ಈ ಭಾಗದ ಜನರಿಗೆ ಎಲ್ಲಿಲ್ಲದ ಖುಷಿ ತಂದಿದೆ.

### ಅಭಿಯಾನದಲ್ಲಿ ಯಾರ್‍ಯಾರ ಪಾತ್ರ.?

ಅಭಿಯಾನದ ಅನುಷ್ಠಾನದ ಜವಾಬ್ದಾರಿ ಹೊತ್ತಿರುವ ವಿಶ್ವ ಹಿಂದೂ ಪರಿಷತ್, ರಾಷ್ಟ್ರೀಯ ಸ್ವಯಂಸೇವಕ ಸಂಘ ಹಾಗೂ ಪರಿವಾರ ಸಂಘಟನೆಗಳವರು ಶ್ರೀರಾಮ ಮಂದಿರ ಸಮಾರಂಭದ ಅಕ್ಷತಾ ಅಭಿಯಾನದ ನೇತೃತ್ವ ವಹಿಸಿ ಸಂಘಟನೆ ಮಾಡುತ್ತಿದ್ದಾರೆ. ವಿವಿಧ ಹಂತಗಳಲ್ಲಿ ಬೈಠಕ್ ಸೇರಿ ಅಭಿಯಾನದ ಪ್ರಗತಿ ಮಾಹಿತಿ ವಿನಿಮಯ ಮಾಡಿಕೊಳ್ಳುತ್ತಿದ್ದಾರೆ.

ಕೋಟ್ಯಂತರ ಜನರ ಐನೂರು ವರ್ಷಗಳ ಕನಸಾಗಿದ್ದ ರಾಮ ಮಂದಿರ ನಿರ್ಮಾಣ ಕಾರ್ಯಕ್ಕೆ ಲಕ್ಷಾಂತರ ಜನ ದೃಡ ಸಂಕಲ್ಪ ಮಾಡಿ ಪ್ರಾಮಾಣಿಕ ಪ್ರಯತ್ನದ ಮೂಲಕ ಶ್ರದ್ಧೆಯಿಂದ ದುಡಿಮೆ ಮಾಡಿದ್ದರಿಂದ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಸ್ವಯಂ ಕರ ಸೇವಕರಾಗಿ ಶ್ರೀ ರಾಮಮಂದಿರ ನಿರ್ಮಾಣದಲ್ಲಿ ಅವಿರತ ಪರಿಶ್ರಮ ಸಲ್ಲಿಸಿದ್ದರಿಂದ ದೇಶದ ಜನ ಕಂಡ ಕನಸು ನನಸಾಗುವ ಕಾಲ ಕೂಡಿ ಬಂದಿದೆ. ಈ ಸಂತಸದ ದಿನವನ್ನು ಇಡೀ ದೇಶವೇ ವಿಜೃಂಭಣೆಯಿಂದ ಆಚರಿಸಲಿದೆ.



**– ಪ್ರಕಾಶ ಬಿರಾದಾರ**

**ಮಂತ್ರಾಕ್ಷತೆ ಹಂಚುವ ಪ್ರಮುಖರು, ಜಿಲ್ಲಾ ಧರ್ಮಚಾರಿ ಪ್ರಮುಖರು.**

# ಶೈಕ್ಷಣಿಕ ಸಂಸ್ಥೆಗಳ ಬೆಳವಣಿಗೆಗೆ ಮೌಲ್ಯಮಾಪನ ವಿಶ್ಲೇಷಣೆ ಅವಶ್ಯ



**ಉದಯರಶ್ಮಿ ನ್ಯೂಸ್**

ವಿಜಯಪುರ: ಶೈಕ್ಷಣಿಕ ಸಂಸ್ಥೆಗಳು ಉನ್ನತ ಮಟ್ಟದಲ್ಲಿ ಬೆಳೆಯಲು ಆಗಾಗ ಆಡಳಿತಾತ್ಮಕ ಮತ್ತು ಶೈಕ್ಷಣಿಕ ಮೌಲ್ಯಮಾಪನ ಕಾರ್ಯವೈಖರಿಯನ್ನು ವಿಶ್ಲೇಷಿಸುವುದು ಅವಶ್ಯವಾಗಿದೆ ಎಂದು ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ ಹೇಳಿದ್ದಾರೆ.

ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎವಿಎಸ್ ಆಯುರ್ವೇದ ಮಹಾವಿದ್ಯಾಲಯದ ಆಸ್ಪತ್ರೆ ಮತ್ತು ಸಂಶೋಧನೆ ಕೇಂದ್ರದಲ್ಲಿ ಇಂದು ಶುಕ್ರವಾರ ನಡೆದ ಬಿ.ಎಲ್.ಡಿ.ಇ ಅಂಗ ಸಂಸ್ಥೆಗಳ ವಾರ್ಷಿಕ ಆಡಳಿತ ಮತ್ತು ಶೈಕ್ಷಣಿಕ ಮೌಲ್ಯಮಾಪನ ಮಂಥನ–3 ಉದ್ಘಾಟಿಸಿ ಅವರು ಮಾತನಾಡಿದರು.

ಶೈಕ್ಷಣಿಕ ಗುಣಮಟ್ಟ ಸುಧಾರಿಸಲು ಬಿ.ಎಲ್.ಡಿ.ಇ ಸಂಸ್ಥೆ ಪ್ರಮಾಣಿತ ಕಾರ್ಯಾಚರಣೆ ವಿಧಾನ(ಎಸ್‌ಒಪಿ) ಜಾರಿಗೆ ತಂದಿದೆ. ಇದರಿಂದ ಶಿಕ್ಷಣ ಕ್ಷೇತ್ರದಲ್ಲಿ ಗಣನೀಯವಾಗಿ ಸುಧಾರಣೆಯಾಗಲಿದೆ ಎಂದು ಅವರು ಹೇಳಿದರು.

ಬಿ.ಎಲ್.ಡಿ.ಇ ಸಂಸ್ಥೆಯ ಮುಖ್ಯ ಆಡಳಿತಾಧಿಕಾರಿ ಡಾ. ಆರ್. ಬಿ.ಕೊಟ್ನಾಳ ಮಾತನಾಡಿ, ಬಿ.ಎಲ್.ಡಿ.ಇ ಅಂಗ ಸಂಸ್ಥೆಗಳಲ್ಲಿ ಎಸ್‌ಒಪಿ ಕಾರ್ಯವೈಖರಿಯ ಅಳವಡಿಕೆ ಮಾಡಿಕೊಳ್ಳಲಾಗಿದೆ. ಇದರಿಂದ ಶಿಕ್ಷಣದ ಧ್ಯೇಯೋದ್ದೇಶಗಳು, ಸಂಸ್ಥೆ ಹೊಂದಿರುವ ದೃಷ್ಟಿಕೋನ, ಶೈಕ್ಷಣಿಕ ಗುಣಮಟ್ಟ ಹಾಗೂ ಆಡಳಿತಾತ್ಮಕ ಸುಧಾರಣೆಯನ್ನು ಅವಲೋಕನ ಮಾಡಲು ಅನುಕೂಲವಾಗಲಿದೆ ಎಂದು ಹೇಳಿದರು.

ಎ.ವಿ.ಎಸ್ ಆಯುರ್ವೇದ ಕಾಲೇಜಿನ ಪ್ರಾಚಾರ್ಯ ಡಾ. ಸಂಜಯ ಕಡ್ಲಿಮಟ್ಟಿ ಮಾತನಾಡಿ, ನಮ್ಮ ಮಹಾವಿದ್ಯಾಲಯದಲ್ಲಿ ವಾರ್ಷಿಕ ಆಡಳಿತಾತ್ಮಕ ಹಾಗೂ ಶೈಕ್ಷಣಿಕ ಪರಿವೀಕ್ಷಣೆಯನ್ನು ನ್ಯಾಕ್ ಪೂರ್ವಸಿದ್ಧತೆಗಾಗಿ ಆಯೋಜಿಸಿರುವುದು ಹೆಮ್ಮೆಯ ವಿಷಯವಾಗಿದೆ. ಇದರಿಂದ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಶೈಕ್ಷಣಿಕ ಗುಣಮಟ್ಟ ಸುಧಾರಣೆಯಾಗಿ ಜಾಗತಿಕ ಮಟ್ಟದಲ್ಲಿ ಹೆಸರು ಮಾಡಲು ಸಹಾಯಕಾರಿಯಾಗಿದೆ ಎಂದು ಹೇಳಿದರು.

ಬಿ.ಎಲ್.ಡಿ.ಇ ಸಂಸ್ಥೆಯ ನಾನಾ ವೃತ್ತಿಪರ ಹಾಗೂ ಪದವಿ ಕಾಲೇಜುಗಳ ವಾರ್ಷಿಕ, ಶೈಕ್ಷಣಿಕ ಮತ್ತು ಆಡಳಿತಾತ್ಮಕ ಮೌಲ್ಯಮಾಪನದ ಬಾಹ್ಯ ಪರಿವೀಕ್ಷಕರಾಗಿ ಹುಬ್ಬಳ್ಳಿಯ ಕೆಎಲ್‌ಇ ತಾಂತ್ರಿಕ ವಿಶ್ವವಿದ್ಯಾಲಯದ ನಿರ್ದೇಶಕ ಡಾ. ಎ. ಅರ್. ಸೋಲಾಪುರ ಹಾಗೂ ಮಹಾರಾಷ್ಟ್ರದ ದೇವಗಿರಿ ತಾಂತ್ರಿಕ ಮಹಾವಿದ್ಯಾಲಯದ ಪ್ರಾಧ್ಯಾಪಕ ಡಾ. ಎಸ್. ಯು. ಲಹಾನೆ ಪಾಲ್ಗೊಂಡರು.

ಈ ಸಭೆಯಲ್ಲಿ ಬಿ.ಎಲ್.ಡಿ.ಇ ಸಂಸ್ಥೆಯ ವೃತ್ತಿಪರ ಕಾಲೇಜುಗಳಾದ ಎಂಜಿನಿಯರಿಂಗ್, ಫಾರ್ಮಸಿ, ನರ್ಸಿಂಗ್, ಆಯುರ್ವೇದ ಮಹಾವಿದ್ಯಾಲಯ ಹಾಗೂ ಪದವಿ ಕಾಲೇಜುಗಳಾದ ಎಸ್. ಬಿ. ಆರ್ಟ್ಸ್ ಮತ್ತು ಕೆ.ಸಿ.ಪಿ ಸೈನ್ಸ್ ಕಾಲೇಜ, ಎ. ಎಸ್. ಪಾಟೀಲ ಕಾಮರ್ಸ್ ಕಾಲೇಜ, ನ್ಯೂ ಆರ್ಟ್ಸ್ ಮತ್ತು ಟಿ.ಜಿ.ಪಿ ಸೈನ್ಸ ಕಾಲೇಜ, ಜೆ.ಎಸ್.ಎಸ್. ಶಿಕ್ಷಣ ಮಹಾವಿದ್ಯಾಲಯ, ಬಂಗಾರಮ್ಮ ಸಜ್ಜನ ಮಹಿಳಾ ಪದವಿ ಮಹಾವಿದ್ಯಾಲಯ, ತಿಕೋಟಾದ ಕಾಮರ್ಸ್ ಕಾಲೇಜ, ಬಾಗಲಕೋಟೆ ಜಿಲ್ಲೆಯ ಜಮಖಂಡಿಯ ಬಿ. ಎಚ್. ಎಸ್ ಆರ್ಟ್ಸ ಮತ್ತು ಬಸವನ ಬಾಗೇವಾಡಿ ಬಸವೇಶ್ವರ ಆರ್ಟ್ಸ ಮತ್ತು ಕಾಮರ್ಸ ಕಾಲೇಜಿನ ಮಹಾವಿದ್ಯಾಲಯಗಳ ಪ್ರಾಚಾರ್ಯರು ತಮ್ಮ ಸಂಸ್ಥೆಯ ಆಡಳಿತಾತ್ಮಕ ಹಾಗೂ ಶೈಕ್ಷಣಿಕ ಗುಣಮಟ್ಟದ ಸುಧಾರಣೆಯ ವಾರ್ಷಿಕ ವರದಿಯನ್ನು ಪ್ರಸ್ತುತ ಪಡಿಸಿದರು.

ಈ ಸಂದರ್ಭದಲ್ಲಿ ಬಿ.ಎಲ್.ಡಿ.ಇ ಸಂಸ್ಥೆಯ ಆಡಳಿತಾಧಿಕಾರಿಗಳಾದ ಪ್ರೊ. ಎಸ್. ಎಚ್. ಲಗಳಿ, ಪ್ರೊ. ಕೆ. ಜಿ. ಪೂಜಾರಿ, ಪ್ರೊ. ಬಿ. ಆರ್. ಪಾಟೀಲ ಮತ್ತು ಪ್ರೊ. ಐ. ಎಸ್. ಕಾಳಪ್ಪನವರ ಉಪಸ್ಥಿತರಿದ್ದರು.

ಬಿ.ಎಲ್.ಡಿ.ಇ ಎಸ್.ಒ.ಪಿ ಸಂಚಾಲಕ ಡಾ. ರಮೇಶ ಜೀರಗಾಳ ವಂದಿಸಿದರು. ಡಾ. ಎ. ಎಂ. ಮದನಿ ನಿರೂಪಿಸಿದರು.

# ಸಂಗಮೇಶ್ವರ ಜಾತ್ರೆ ಅದ್ಧೂರಿ ರಥೋತ್ಸವ ಸಂಪನ್ನ



**ಉದಯರಶ್ಮಿ ನ್ಯೂಸ್**

ಸಿಂದಗಿ: ಪಟ್ಟಣದ ಆರಾಧ್ಯ ದೇವತೆ ಶ್ರೀ ಸಂಗಮೇಶ್ವರ ಜಾತ್ರಾ ಮಹೋತ್ಸವವು ಶುಕ್ರವಾರ ವಿಜೃಂಭಣೆಯಿಂದ ಜರುಗಿತು.

ಬೆಳಿಗ್ಗೆ ರಥೋತ್ಸವ ಹಾಗೂ ಪಲ್ಲಕ್ಕಿ ಉತ್ಸವಗಳು ಭಕ್ತ ಸಮೂಹದೊಂದಿಗೆ ದೇವಸ್ಥಾನದಿಂದ ನಂದಿಕೋಲ ಹಾಗೂ ಸಕಲವಾದ್ಯಗಳೊಂದಿಗೆ ಪ್ರಾರಂಭವಾಯಿತು. ಶ್ರೀ ಸಂಗಮೇಶ್ವರ ಮತ್ತು ಭ್ರಮರಾಂಭಿಕಾ ಉತ್ಸವ ಮೂರ್ತಿಗಳ ಪಲ್ಲಕ್ಕಿ ಉತ್ಸವದ ಮೆರವಣಿಗೆ ಮತ್ತು ರಥೋತ್ಸವ ನೀಲಗಂಗಾದೇವಸ್ಥಾನದ ಮಾರ್ಗವಾಗಿ ಹಳೆ ಬಜಾರದಲ್ಲಿನ ಶ್ರೀಬಸವೇಶ್ವರ ದೇವಸ್ಥಾನದವರೆಗೆ ನಡೆಯಿತು. ದೇವಸ್ಥಾನದಲ್ಲಿ ಮತ್ತು ಮಾರ್ಗ ಮಧ್ಯ ನೀಲಗಂಗಾ ದೇವಸ್ಥಾನ ಹಾಗೂ ಹಳೆ ಬಜಾರದ ಮಧ್ಯದಲ್ಲಿ ವಿಶ್ವನಾಥ ಬಡಿಗೇರ ಹಾಗೂ ಸಂಗಡಿಗರು ಪುರವಂತರ ಸೇವೆ ಸಲ್ಲಿಸಿದರು. ಪುರವಂತರ ಸೇವೆಯೊಂದಿಗೆ ವಿವಿಧ ಕಾರ್ಯಕ್ರಮಗಳು ಜರುಗಿದವು. ಮಾರ್ಗದುದ್ದಕ್ಕೂ ಭಕ್ತಾಧಿಗಳು ಉತ್ಸವ ಪಲ್ಲಕ್ಕಿಯಲ್ಲಿರುವ ಶ್ರೀ ಸಂಗಮೇಶ್ವರ ಮತ್ತು ಭ್ರಮರಾಂಭಿಕಾ ಉತ್ಸವ ಮೂರ್ತಿಗಳಿಗೆ ಆರತಿ ಮತ್ತು ಪೂಜೆ ಸಲ್ಲಿಸೂವ ಮೂಲಕ ದೇವರ ಕೃಪೆಗೆ ಪಾತ್ರರಾದರು.

ಸ್ಥಳೀಯ ಸಾರಂಗಮಠ–ಗಚ್ಚಿನಮಠದ ಡಾ.ಪ್ರಭು ಸಾರಂಗದೇವ ಶಿವಾಚಾರ್ಯರು, ಭೀಮಾಶಂಕರಮಠದ ಸದ್ಗುರು ದತ್ತಪ್ಪಯ್ಯ ಮಹಾಸ್ವಾಮಿಗಳು ರಥೋತ್ಸವಕ್ಕೆ ಚಾಲನೆ ನೀಡಿದರು.

ಪಂಡಿತ ಕುಲಕರ್ಣಿ, ವಿಜಯ ಕುಲಕರ್ಣಿ, ನೀಲಗಂಗಾದೇವಿ ದೇವಸ್ಥಾನದ ಧರ್ಮದರ್ಶಿ ಸುನೀಲ ದೇವರಮನಿ, ಶ್ರೀಶೈಲ ನಂದಿಕೋಲ, ಶ್ರೀ ಸಂಗಮೇಶ್ವರ, ಮಲ್ಲಿಕಾರ್ಜುನ ಹಾಗೂ ಬೊಮ್ಮಲಿಂಗೇಶ್ವರ ದೇವಸ್ಥಾನಗಳ ಅರ್ಚಕರು, ಸ್ಥಳಿಯ ಹಾಗೂ ಸುತ್ತಮುತ್ತಲಿನ ಭಕ್ತರು ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿದ್ದರು.

ಪಲ್ಲಕ್ಕಿ ಉತ್ಸವ ಹಾಗೂ ರಥೋತ್ಸವ ಮರುಳಿ ದೇವಸ್ಥಾನಕ್ಕೆ ಬಂದ ನಂತರ ಭಕ್ತರು ನೈವೆದ್ಯ ಸಲ್ಲಿಸಿ ದೇವರ ಕೃಪೆಗೆ ಪಾತ್ರರಾದರು.

# ರಂಗಭೂಮಿ ಉಳಿವಿಗೆ ಸಾರ್ವಜನಿಕರ ಸಹಕಾರ ಅಗತ್ಯ



**ಉದಯರಶ್ಮಿ ನ್ಯೂಸ್**

ಸಿಂದಗಿ: ತಂತ್ರಜ್ಞಾನ ಬೆಳೆಯುತ್ತಿದ್ದಂತೆ ಮೋಬೈಲ್ ಬಳಕೆ ಹೆಚ್ಚಾಗಿ ಸಾಮಾಜಿಕ ನಾಟಕಗಳು, ಸಂಗೀತ, ಪುರಾಣ ಪ್ರವಚನಗಳು, ನಶಿಸಿ ಹೋಗುತ್ತಿವೆ ಎಂದು ಬಿಜೆಪಿ ಓಬಿಸಿ ತಾಲೂಕಾಧ್ಯಕ್ಷ ರವಿಕಾಂತ ನಾಯ್ಕೋಡಿ ಹೇಳಿದರು.

ತಾಲೂಕಿನ ಮೋರಟಗಿ ಗ್ರಾಮದ ಸಮೀಪವಿರುವ ಬಗಲೂರ ಗ್ರಾಮದಲ್ಲಿ ಶ್ರೀ ಸೋಮಲಿಂಗೇಶ್ವರ ಜಾತ್ರಾ ಮಹೋತ್ಸವದ ಪ್ರಯುಕ್ತ ಹಮ್ಮಿಕೊಂಡ ರೈತನ ಹೆಸರು ನಾಡಿಗೆ ಉಸಿರು ನಾಟಕ ಉದ್ಘಾಟಿಸಿ ಮಾತನಾಡಿದ ಅವರು, ರಂಗಭೂಮಿ ಉಳಿಸಿ ಬೆಳೆಸುವುದು ನಮ್ಮ ನಿಮ್ಮೆಲ್ಲರ ಆದ್ಯ ಕರ್ತವ್ಯವಾಗಬೇಕು. ರಂಗಭೂಮಿ ಉಳಿವಿಗಾಗಿ ಸಾರ್ವಜನಿಕರು ಸಹಕಾರ ನೀಡಬೇಕು. ನಮ್ಮ ಸಂಸ್ಕೃತಿ, ಕಲೆ, ಸಾಮಾಜಿಕ ಸಂದೇಶಗಳನ್ನು ಸಾರುವ ನಾಟಕಗಳು, ಜನರ ಮನಸ್ಸನ್ನು ಸೆಳೆಯುತ್ತಿವೆ. ನಾಟಕ ಮತ್ತು ಸಂಗೀತಕ್ಕೆ ದಣಿದ ವ್ಯಕ್ತಿಗೆ ನೆಮ್ಮದಿ ಕೊಡುವ ಸಾಮರ್ಥ್ಯವಿದೆ ಎಂದರು.

ಈ ವೇಳೆ ದಿವ್ಯ ಸಾನಿಧ್ಯ ವಹಿಸಿದ ಗುರುಲಿಂಗಯ್ಯ ಸ್ವಾಮಿಗಳು ಆಶೀರ್ವಚನ ನೀಡಿದರು.

ಶಿವು ಮಾಗಣಗೇರಿ, ರುದ್ರಗೌಡ ಕಿರಣಗಿ, ಮಡಿವಾಳ ಹೂನ್ನಳಿ, ಅಶೋಕ ನಾರಾಯಣಪೂರ, ರಾಜು ಸಾಂಬಾ, ರಾಜುಗೌಡ ಬಿರಾದಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಪರೀಕ್ಷೆಗಳು ಜ್ಞಾನ, ಸೃಜನಶೀಲತೆ ಅಳೆವ ಮಾಪನಗಳು



**ಉದಯರಶ್ಮಿ ನ್ಯೂಸ್**

ಸಿಂದಗಿ: ಪರೀಕ್ಷೆಗಳು ಭಯವಲ್ಲ ಅವುಗಳು ನಮ್ಮ ಜ್ಞಾನ, ಸೃಜನಶೀಲತೆಯನ್ನು ಅಳೆಯುವ ಮಾಪನಗಳು ಅಷ್ಟೇ. ಪರೀಕ್ಷೆಗಳನ್ನು ಭಯದಿಂದ ಕಾಣದೆ ಅವುಗಳನ್ನು ಸವಾಲಾಗಿ ಸ್ವೀಕರಿಬೇಕು ಎಂದು ಹುಮನಾಬಾದಿನ ಪ್ರಥಮ ದರ್ಜೆ ಕಾಲೇಜಿನ ಆಂಗ್ಲಭಾಷಾ ಪ್ರಾಧ್ಯಾಪಕ ಸಿ.ಎಸ್.ಆನಂದ ಹೇಳಿದರು.

ಅವರು ಪಟ್ಟಣದ ಎಚ್.ಜಿ.ಪದವಿ ಪೂರ್ವ ಕಾಲೇಜಿನಲ್ಲಿ ದ್ವಿತಿಯ ಪಿಯುಸಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿರುವ ಆಂಗ್ಲಭಾಷಾ ವಿಷಯದ ಒಂದು ದಿನದ ಕಾರ್ಯಾಗಾರದಲ್ಲಿ ಭಾಗವಹಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಕೇವಲ ಗುರಿ ತಲುಪುವ ಉದ್ದೇಶ ಹೊಂದದೆ ಉನ್ನತ ಸಾಧನೆ ಮಾಡುವ ಗುರಿಯನ್ನು ಹೊತ್ತುಕೊಂಡಿರಬೇಕು. ಯುವಶಕ್ತಿ ಈ ದೇಶದ ಶಕ್ತಿ ಈ ದೇಶದ ಅವಿಭಾಜ್ಯ ಅಂಗ. ನಮ್ಮನ್ನು ಹೆತ್ತವರು ನಮ್ಮ ಮೇಲೆ ಅಗಾದ ಕನಸುಗಳನ್ನು ಇಟ್ಟಿಕೊಂಡು ಬದುಕುತ್ತಿದ್ದಾರೆ ಅವರ ಆಸೆಗೆ ನಾವು ನಿರಾಸೆ ಮಾಡದೆ ನಿರಂತರ ಪ್ರಯತ್ನದ ಅಧ್ಯಯನಶೀಲತೆ ನಮ್ಮ ರಕ್ತದಲ್ಲಿ ಮೂಡಬೇಕು ಆಗ ನಾವು ಸಾಧಕರ ಸಾಲಿಗೆ ಸೇರುತ್ತೇವೆ ಎಂದರು.

ಕಾರ್ಯಗಾರದ ಅಧ್ಯಕ್ಷತೆ ವಹಿಸಿ ಪ್ರಾಚಾರ್ಯ ಎ.ಆರ್.ಹೆಗ್ಗಣದೊಡ್ಡಿ ಅವರು ಮಾತನಾಡಿ, ಸಾಧನೆ ಯಾರ ಸೊತ್ತೂ ಅಲ್ಲ. ಅದನ್ನು ಪಡೆದುಕೊಳ್ಳುವ ಛಲ ನಮ್ಮಲ್ಲಿರಬೇಕು. ನಾವು ಎಷ್ಟು ಒದುತ್ತೇವೆ ಎನ್ನುವದು ಮುಖ್ಯವಲ್ಲ ಓದಿದನ್ನು ಎಷ್ಟು ಅರ್ಥೈಸಿಕೊಂಡಿದ್ದೇವೆ ಎಂಬ ಅರಿವಿರಬೇಕು. ಹೆಚ್ಚು ಅಂಕಗಳಿಕೆಗೆ ಬೇಕಾಗಿರುವ ಚರ್ಚೆಗಳು ನಮ್ಮಿಂದಾಗಬೇಕು ಎಂದರು.

ಈ ವೇಳೆ ಆಂಗ್ಲಭಾಷಾ ಉಪನ್ಯಾಸಕ ಎಸ್.ಎ.ಪಾಟೀಲ, ಎ.ಬಿ.ಪಾಟೀಲ ವೇದಿಕೆ ಮೇಲಿದ್ದರು. ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಬಿ.ಎಸ್.ಬಿರಾದಾರ, ಆರ್. ಬಿ. ಹೊಸಮನಿ, ಎಸ್.ಪಿ.ಬಿರಾದಾರ, ಎಮ್.ಎನ್. ಅಜ್ಜಪ್ಪ, ಮುಕ್ತಾಯಕ್ಕ ಕತ್ತಿ, ಸಿದ್ದಲಿಂಗ ಕಿಣಗಿ, ಡಾ.ಶಾಂತುಲಾಲ ಚವ್ಹಾಣ, ಸತೀಶ ಬಸರಕೋಡ, ಆರ್. ವಾಯ್.ಪರೀಟ, ಗಂಗಾರಾಮ ಪವಾರ, ಸಚಿನ ಕನ್ನಾಳ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

# ಜ.21ರಂದು ಆರೋಗ್ಯ ಉಚಿತ ತಪಾಸಣಾ ಶಿಬಿರ



**ಉದಯರಶ್ಮಿ ನ್ಯೂಸ್**

ಸಿಂದಗಿ: ಮಾಜಿ ಸಚಿವ ದಿ.ಎಮ್.ಸಿ.ಮನಗೂಳಿ ಅವರ 3ನೇ ಪುಣ್ಯ ಸ್ಮರಣೆಯ ನಿಮಿತ್ಯ ಪಟ್ಟಣದ ಮನಗೂಳಿ ಆಸ್ಪತ್ರೆ ಉಚಿತ ಬೃಹತ ಆರೋಗ್ಯ ತಪಾಸಣಾ ಶಿಬಿರವನ್ನು ಜ.21 ರಂದು ರವಿವಾರ ಮುಂಜಾನೆ 10 ಗಂಟೆಯಿಂದ ಮಧ್ಯಾನ್ಹ 3 ಗಂಟೆಯ ವರೆಗೆ ಮನಗೂಳಿ ಆಸ್ಪತ್ರೆಯಲ್ಲಿಯೆ ಆಯೋಜಿಸಲಾಗಿದೆ ಎಂದು ಮನಗೂಳಿ ಆಸ್ಪತ್ರೆಯ ಡಾ.ಶಾಂತವೀರ ಮನಗೂಳಿ ಹೇಳಿದರು.

ಶುಕ್ರವಾರ ಈ ಕುರಿತು ಪತ್ರಿಕಾ ಹೇಳಿಕಾ ಮೂಲಕ ತಿಳಿಸಿದ ಅವರು, ದಿ.ಎಮ್.ಸಿ.ಮನಗೂಳಿ ಅವರ ಸ್ಮರಣೆಗಾಗಿ ಶಾಸಕ ಅಶೋಕ ಮನಗೂಳಿ ಅವರ ನೇತೃತ್ವದಲ್ಲಿ ಈ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ತಾಲೂಕಿನ ಜನತೆ ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು. ಶಿಬಿರದಲ್ಲಿ ತಜ್ಞ ವೈದ್ಯರು ಆಗಮಿಸುವರು. ವಿವಿಧ ರೋಗಗಳಾದ ಹೃದಯ ಸಂಬಂಧಿಸಿದ ಕಾಯಿಲೆ, ನರರೋಗ, ಕ್ಯಾನ್ಸರ್, ಸ್ತ್ರೀರೋಗ, ಮೂತ್ರಪಿಂಡದಲ್ಲಿ ಕಲ್ಲು, ಚರ್ಮರೋಗ, ಇಸಿಜಿ, ರಕ್ತತಪಾಷಣೆ, ರಕ್ತದ ಒತ್ತಡ, ಸಕ್ಕರೆ ಕಾಯಿಲೆ ಸೇರಿದಂತೆ ಅನೇಕ ರೋಗಗಳ ತಪಾಸಣಾ ಕಾರ್ಯ ನಡೆಯುವದು.

ಶಿಬಿರದಲ್ಲಿ ಡಾ.ಶಾಂತವೀರ ಮನಗೂಳಿ, ಡಾ.ಸಂಧ್ಯಾ ಮನಗೂಳಿ, ಡಾ.ಕುಶಾಲ ತಾರಾಪೂರ, ಡಾ.ವಿಜಯಲಕ್ಷ್ಮಿ ತಾರಾಪೂರ, ಡಾ.ಮಲ್ಲಪ್ಪ ಹುಗ್ಗಿ, ಡಾ.ಗೌತಮ ವಗ್ಗರ, ಡಾ.ಸುನೀಲ ಸಜ್ಜನ, ಡಾ.ಸೌಮ್ಯಾ ಮನಗೂಳಿ ಸೇರಿದಂತೆ ಅನೇಕ ನುರಿತ ವೈದ್ಯರು ಭಾಗವಹಿಸುವರು. ಶಿಬಿರದಲ್ಲಿ ಪಾಲ್ಗೊಳ್ಳುವವರು ಕೂಡಲೇ ಹೆಸರನ್ನು ನೊಂದಾಯಿಸಬೇಕು. ಮತ್ತು ಈ ಮೋಬೈಲ್ ಸಂಖ್ಯೆ 9141163387, 9740673613, 6366676400ಗೆ ಸಂಪರ್ಕಿಸಲು ಕೋರಲಾಗಿದೆ.

# ಎಸ್.ಡಿ.ಎಂ.ಸಿ ನೂತನ ಅಧ್ಯಕ್ಷರಾಗಿ ಹಾರಿವಾಳ ಆಯ್ಕೆ



**ಉದಯರಶ್ಮಿ ನ್ಯೂಸ್**

ಢವಳಗಿ: ನಮ್ಮೂರ ಪ್ರೌಢಶಾಲೆ ಅಭಿವೃದ್ಧಿಗಾಗಿ ಒಂದು ಲಕ್ಷ ರೂ.ಗಳನ್ನು ದೇಣಿಗೆಯಾಗಿ ನೀಡಿ ಕುಡಿವ ನೀರು ಹಾಗೂ ಇನ್ನೀತರ ಮೂಲಸೌಕರ್ಯ ಕಲ್ಪಿಸಿಕೊಡುವಲ್ಲಿ ಶ್ರಮಿಸುತ್ತೇನೆ ಎಂದು ತಾಲ್ಲೂಕಿನ ರೂಢಗಿ ಸರಕಾರಿ ಪ್ರೌಢಶಾಲೆ ಎಸ್.ಡಿ.ಎಂ.ಸಿ ನೂತನ ಅಧ್ಯಕ್ಷ ಸಂಗಮೇಶ ಎನ್.ಹಾರಿವಾಳ ಹೇಳಿದರು.

ತಾಲ್ಲೂಕಿನ ರೂಢಗಿ ಸರಕಾರಿ ಪ್ರೌಢಶಾಲೆಯಲ್ಲಿ ಶುಕ್ರವಾರ ನಡೆದ ನೂತನ ಎಸ್.ಡಿ.ಎಂ.ಸಿ ರಚನೆ ಪ್ರಕ್ರಿಯೆ ಬಳಿಕ ಅವರು ಗ್ರಾಮಸ್ಥರನ್ನುದ್ದೇಶಿಸಿ ಮಾತನಾಡಿದರು.

ರೂಢಗಿ ಸರಕಾರಿ ಪ್ರೌಢಶಾಲೆಗೆ ಬರಲು ಸರಿಯಾದ ರಸ್ತೆ ಇಲ್ಲ. ಈ ಶಾಲೆಯನ್ನು ಹಾಲಿ ಶಾಸಕ ಸಿ.ಎಸ್.ನಾಡಗೌಡ ಅಪ್ಪಾಜಿ ಅವರು ಮಂಜೂರಾತಿ ಮಾಡಿಸಿಕೊಟ್ಟಿದ್ದರು. ಈ ಭಾಗದಲ್ಲಿ ಪಿಯು ಕಾಲೇಜು ಆರಂಭಕ್ಕೆ ಬೇಡಿಕೆ ಇದ್ದು, ಅದರ ಬಗ್ಗೆ ಗ್ರಾಮಸ್ಥರ ಜೊತೆಗೂಡಿ ಸಂಬಂಧಿಸಿದ ಶಾಸಕರು, ಸಚಿವರು,ಸ ರಕಾರದ ಅಧಿಕಾರಿಗಳ ಗಮನಕ್ಕೆ ತರುವ ಕೆಲಸ ಮಾಡುತ್ತೇನೆ ಎಂದು ಹೇಳಿದರು.

ಗ್ರಾಪಂ ಮಾಜಿ ಅಧ್ಯಕ್ಷ ಕುಮಾರ ಸೂಳಿಭಾವಿ, ಮುಖಂಡ ಶ್ರೀಶೈಲ್ ದೊಡಮನಿ ಮಾತನಾಡಿದರು.

ಶಿಕ್ಷಣ ಸಂಯೋಜಕ ಎಚ್.ಎ.ಮೇಟಿ, ಮುಖಂಡರಾದ ಎಸ್.ಪಿ.ಸೇವಾಲಾಲ್, ಮುಖ್ಯಗುರು ಬಿ.ಎಚ್.ನಾಯಕರ ಮಾತನಾಡಿದರು.

ಗ್ರಾ.ಪಂ ಅಧ್ಯಕ್ಷ ಬಸವರಾಜ ಬೆಲ್ಲದ, ಗ್ರಾಮಸ್ಥರಾದ ಬಸವರಾಜ ದೊಡಮನಿ, ಶಿವರಾಜ ಲಮಾಣಿ, ಸದಾಶಿವ ಸೂಳಿಭಾವಿ, ಶರಣು ಕೋರಿ, ಆನಂದ ಲಮಾಣಿ, ಪರಶು ರಾಠೋಡ, ನಿಂಗು ಕೋಲಕಾರ, ರಾಜು ಈಳಗೇರ,ಪಾಂಡು ಈಳಗೇರ, ರಮೇಶ ನಾಗರಾಳ, ಲಕ್ಷ್ಮಣ ಬೊಮ್ಮಣಗಿ, ಲಕ್ಷ್ಮಣ ತಳವಾರ, ಮಲಕಾಜಿ ಚಲವಾದಿ ಇದ್ದರು.

ಶಿಕ್ಷಕರಾದ ಎಂ.ವಾಯ್.ಕಳ್ಳಿಮನಿ, ಎಸ್.ಪಿ.ಮುತ್ತಗಿ, ಅನಿಲ್ ಚವ್ಹಾಣ, ಸಾಬಣ್ಣ ಮಾದರ, ಪಿ.ಪಿ.ಕೋಟಿ, ಬಿ.ಬಿ.ಪಾಟೀಲ್, ಎಸ್.ಎಸ್.ರಾಠೋಡ, ಜಿ.ಸಿ.ಸಬರದ ಮೊದಲಾದವರು ಇದ್ದರು.

**ಎಸ್.ಡಿ.ಎಂ.ಸಿ ರಚನೆ**

ಸರಕಾರದ ನಿರ್ದೇಶನದಂತೆ ಎಸ್.ಡಿ.ಎಂ.ಸಿ ರಚನೆಗೆ ಆದೇಶ ಬಂದ ಹಿನ್ನೆಲೆಯಲ್ಲಿ ಶುಕ್ರವಾರ ಎಸ್.ಡಿ.ಎಂ.ಸಿ ರಚಿಸಲಾಯಿತು.

ನೂತನ ಅಧ್ಯಕ್ಷರಾಗಿ ಸಂಗಮೇಶ ಹಾರಿವಾಳ, ಸದಸ್ಯರಾಗಿ ಸುರೇಖಾ ಹಡಪದ, ಬೀಬಿಜಾನ ಪಾಟೀಲ್, ಮಂಜುಳಾ ಈಳಗೇರ,ಯಮನಪ್ಪ ಆಹೇರಿ, ಆನಂದ ರಾಠೋಡ, ಸೀತವ್ವ ಮಾದರ, ಸೋಮು ವಡ್ಡರ, ಬಸಮ್ಮ ಪೂಜಾರಿ ಅವರನ್ನು ಆಯ್ಕೆ ಮಾಡಲಾಯಿತು.

## ಹೆಸ್ಕಾಂ: ಕುಂದುಕೊರತೆ ಸಭೆ ಇಂದು

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ದಿ: 20 ರಂದು ಶನಿವಾರ(ಇಂದು) ಬೆಳಿಗ್ಗೆ 10 ಘಂಟೆಗೆ ದೇವರಹಿಪ್ಪರಗಿ ಇಂಡಿ ರಸ್ತೆಯಲ್ಲಿಯ ಹೆಸ್ಕಾಂ ಉಪವಿಭಾಗೀಯ ಕಚೇರಿಯಲ್ಲಿ ವಿದ್ಯುತ್ ಗ್ರಾಹಕರ ಕುಂದು ಕೊರತೆ ಸಭೆ ಹಮ್ಮಿಕೊಳ್ಳಲಾಗಿದೆ.

ತಾಲ್ಲೂಕಿನ ಎಲ್ಲಾ ಗ್ರಾಹಕರು ಸಭೆಗೆ ಆಗಮಿಸಿ ತಮ್ಮ ಕುಂದುಕೊರತೆಗಳನ್ನು ವ್ಯಕ್ತಪಡಿಸಿ ಪರಿಹಾರ ಕಂಡುಕೊಳ್ಳಬೇಕೆಂದು ಕಾರ್ಯ ಮತ್ತು ಪಾಲನೆ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಪಠ್ಯಪುಸ್ತಕದಲ್ಲಿ ವಚನ ಸಾಹಿತ್ಯವಿರಲಿ



**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಶ್ವಗುರು ಬಸವಣ್ಣ ರಾಜ್ಯದ ಸಾಂಸ್ಕೃತಿಕ ನಾಯಕ ಎಂದು ಸರಕಾರ ಘೋಷಣೆ ಮಾಡಿದ್ದು ಶ್ಲಾಘನೀಯ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಹಾಸಿಂಪೀರ ವಾಲಿಕಾರ ಅಭಿಪ್ರಾಯ ವ್ಯಕ್ತಪಡಿಸಿದರು.

ಸಾಮಾಜಿಕ ಸಮಾನತೆಯ ಹರಿಕಾರ ಕ್ರಾಂತಿಯೋಗಿ ಬಸವಣ್ಣ ಅನುಯಾಯಿಗಳು, ಪೂಜ್ಯಶ್ರೀಗಳು ಸರಕಾರದ ಈ ಸೂಕ್ತ ನಿರ್ಧಾರದಿಂದ ಅತ್ಯಂತ ಸಂತುಷ್ಟರಾಗಿದ್ದಾರೆ.

ಎಲ್ಲಾ ಧರ್ಮದ ತತ್ವ ಸಿದ್ಧಾಂತ ಬಸವಣ್ಣನ ವಚನ ಸಾಹಿತ್ಯದಲ್ಲಿ ಕಾಣುತ್ತೇವೆ. ವಿಶ್ವವೇ ಅನುಕರಣೆ ಮಾಡುವ ಬಸವಣ್ಣನವರ ವಚನ ಸಾಹಿತ್ಯದ ವಿವಿಧ ಭಾಷೆಗಳಲ್ಲಿ ಅನುವಾದ ಗೊಂಡಿವೆ ಹಾಗೂ ರಾಜ್ಯದ ಎಲ್ಲಾ ತರಗತಿಯ ಪಠ್ಯ ಪುಸ್ತಕದಲ್ಲಿ ವಚನ ಸಾಹಿತ್ಯದ ಪಾಠಗಳು ಅಳವಡಿಸಬೇಕೆಂದು ಹಾಸಿಂಪೀರ ವಾಲಿಕಾರ ಸರ್ಕಾರವನ್ನು ಒತ್ತಾಯಿಸಿದರು.

# ಹೊನ್ನಳ್ಳಿ ಗ್ರಾಮದ ಕೆರೆಗೆ ತಾಪಂ ಇಒ ರಾಮು ಭೇಟಿ



**ಉದಯರಶ್ಮಿ ನ್ಯೂಸ್**

ಬ್ರಹ್ಮದೇವನಮಡು: ಸಿಂದಗಿ ತಾಲೂಕು ಹೊನ್ನಳ್ಳಿ ಗ್ರಾಮದ ಕೆರೆಗೆ ಶುಕ್ರವಾರ ಸಿಂದಗಿ ತಾಪಂ ಇಒ ರಾಮು ಅಗ್ನಿ ಭೇಟಿ ನೀಡಿ ಪರಿಶೀಲಿಸಿ ಗ್ರಾಮಸ್ಥರಿಂದ ಮಾಹಿತಿ ಪಡೆದು ನಂತರ ಮಾತನಾಡಿ, ಕೆರೆಯಲ್ಲಿರುವ ಮೊಸಳೆ ಸೆರೆ ಹಿಡಿಯಲು ಕೆರೆ ಸುತ್ತಲಿನ ಪ್ರದೇಶಕ್ಕೆ ಸಿಸಿ ಟೀವಿ, ಜಾಳಗಿ ಅಳವಡಿಸುವಂತೆ ಸ್ಥಳದಲ್ಲಿದ್ದ ಗ್ರಾಪಂ ಪಿಡಿಒ ನಾಯ್ಕೋಡಿ ಅವರಿಗೆ ಸೂಚಿಸಿ, ತಾಲೂಕು ಅರಣ್ಯಾಧಿಕಾರಿಗಳಿಗೆ ಫೋನಾಯಿಸಿ ಮಾತನಾಡಿ, ಮೊಸಳೆಗೆ ಬಲೆ ಹಾಕಿ ಸೆರೆ ಹಿಡಿಯುವಂತೆ ತಿಳಿಸಿದರು.

ಈ ವೇಳೆ ಗ್ರಾಪಂ ಪಿಡಿಒ ಎಸ್.ಸಿ.ನಾಯ್ಕೋಡಿ, ಗ್ರಾಪಂ ಅಧ್ಯಕ್ಷರ ಪ್ರತಿನಿಧಿ ಹಣಮಂತ್ರಾಯಗೌಡ ಬಿರಾದಾರ, ಸಾಹೇಬಪಟೇಲ ಮುರಡಿ, ದೇವಿಂದ್ರ ತೊನಶ್ಯಾಳ, ಸಂಗನಗೌಡ ಪಾಟೀಲ, ಭೀಮನಗೌಡ ಹೆಬ್ಬಾಳ, ಮಲ್ಲು ಕೆಂಭಾವಿ, ಹಣಮಂತ ಯಂಟವಾನ, ಇಶ್ಮಾಯಿಲ್ ತಂಗಡಗಿ, ಮಲ್ಲು ಭಜಂತ್ರಿ, ಉಷೇನ ಯಂಕಂಚಿ, ಬಸನಗೌಡ ಪಾಟೀಲ, ದಿನೇಶ ಕಡಕೋಳ,ಅಂಬ್ರಿಶ ಪಾಟೀಲ, ಸುರೇಶ ತಳವಾರ ಇತರರಿದ್ದರು.

# ಕಗ್ಗೋಡ ಆದರ್ಶ ವಿದ್ಯಾಲಯ ಪ್ರವೇಶಕ್ಕೆ ಅರ್ಜಿ ಅಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಗ್ರಾಮೀಣ ತಾಲೂಕಿನ ಕಗ್ಗೋಡ ಗ್ರಾಮದ ಸರಕಾರಿ ಆದರ್ಶ ವಿದ್ಯಾಲಯದ 2024-25 ನೇ ಸಾಲಿಗೆ ಆರನೇ ತರಗತಿ ದಾಖಲಾತಿಗೆ ಪ್ರವೇಶ ಪರೀಕ್ಷೆ ನಡೆಸಲಾಗುವುದು. 2023-24ನೇ ಸಾಲಿನಲ್ಲಿ ವಿಜಯಪುರ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ವ್ಯಾಪ್ತಿಯಲ್ಲಿ ಬರುವ ಶಾಲೆಗಳಲ್ಲಿ ಐದನೇ ತರಗತಿ ಓದುತ್ತಿರುವ ವಿದ್ಯಾರ್ಥಿಗಳಿಂದ ಆನ್ಲೈನ್ ಅರ್ಜಿಗಳನ್ನು ಕರೆಯಲಾಗಿದೆ.

ಫೆಬ್ರುವರಿ ಆರರವರೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ವಿದ್ಯಾರ್ಥಿಯ ಎಸ್.ಎ.ಟಿ.ಎಸ್ ನಂಬರ, ವಿದ್ಯಾರ್ಥಿಯ ಇತ್ತೀಚಿನ ಭಾವಚಿತ್ರ, ವಿದ್ಯಾರ್ಥಿಯ ಆಧಾರ್ ಕಾರ್ಡ್, ಚಾಲ್ತಿಯಲ್ಲಿರುವ ವಿದ್ಯಾರ್ಥಿಯ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯವಾಗಿ ಪಾಲಕರ ಮೊಬೈಲ್ ನಂಬರ್ ನಮೂದಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಮುಖ್ಯೋಪಾಧ್ಯಾಯರು 9902716236, ನೋಡಲ್ ಅಧಿಕಾರಿಗಳು 9880832448, ಕಚೇರಿ ಸಹಾಯಕರು 8971163743 ಇವರನ್ನು ಸಂಪರ್ಕಿಸಲು ವಿಜಯಪುರ ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಮೋದಿನಿ ಎಸ್. ಬಳೋಲಮಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇವರಹಿಪ್ಪರಗಿ: ಗಣರಾಜ್ಯೋತ್ಸವ ಪೂರ್ವಭಾವಿ ಸಭೆ



**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಗಣರಾಜ್ಯೋತ್ಸವ ದಿನಾಚರಣೆಯ ಜವಾಬ್ದಾರಿಗಳನ್ನು ತಾಲ್ಲೂಕು ಆಡಳಿತದ ಜೊತೆಗೆ ವಿವಿಧ ಇಲಾಖೆಗಳು ವಹಿಸಿಕೊಂಡು ಅರ್ಥಪೂರ್ಣವಾಗಿ ಆಚರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಹಶೀಲ್ದಾರ ಪ್ರಕಾಶ ಸಿಂದಗಿ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ಗಣರಾಜ್ಯೋತ್ಸವ, ಅಂಗವಾಗಿ ಕರೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಆಚರಣೆಯ ಜೊತೆಗೆ ಸ್ಥಳೀಯ ಶಾಲೆಗಳ ಮಕ್ಕಳ ಉಪಹಾರ, ಸಾಂಸ್ಕೃತಿಕ ಕಾರ್ಯಕ್ರಮಗಳು, ಧ್ವಜಾರೋಹಣದ ಕುರಿತು ಸೂಕ್ತ ಕ್ರಮವಹಿಸಲು ಸೂಚಿಸಿದರು.

ತಾಲ್ಲೂಕು ಶಿಕ್ಷಕರ ಸಂಘದ ಅಧ್ಯಕ್ಷ ಎ.ಎಚ್.ವಾಲೀಕಾರ ಮಕ್ಕಳಿಗೆ ಉಪಹಾರ ಹಾಗೂ ನೀರಿನ ವ್ಯವಸ್ಥೆ ಕಲ್ಪಿಸಲು ಆಗ್ರಹಿಸಿದರು.

ಕಸಾಪ ಅಧ್ಯಕ್ಷ ಜಿ.ಪಿ.ಬಿರಾದಾರ ಯೋಧನ ಸ್ಮಾರಕದ ರಿಪೇರಿ ಕುರಿತು ಗಮನ ಸೆಳೆದರು.

ನಂತರ ಕಾಶೀನಾಥ ತಳಕೇರಿ, ಜಾನು ಗುಡಿಮನಿ, ಬಸವರಾಜ ತಳಕೇರಿ, ರಾವುತ ತಳಕೇರಿ ಮಾತನಾಡಿ, ಪೂರ್ವಸಭೆಯಲ್ಲಿ ಕೇವಲ ಶಿಕ್ಷಣ ಇಲಾಖೆಯ ಶಿಕ್ಷಕರು ಮಾತ್ರ ಹಾಜರಾಗುತ್ತಾರೆ. ಉಳಿದ ಯಾವ ಇಲಾಖೆಯ ಪ್ರತಿನಿಧಿಗಳು ಭಾಗವಹಿಸುವುದಿಲ್ಲ. ಈ ಕುರಿತು ಅಗತ್ಯ ಕ್ರಮ ಕೈಗೊಳ್ಳಬೇಕು. ಮತ್ತು ಗಣರಾಜ್ಯೋತ್ಸವ ದಿನದಂದು ಕೇವಲ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ವೇದಿಕೆಯಲ್ಲಿರಬೇಕು ಅನ್ಯರಿಗೆ ಅವಕಾಶ ಬೇಡ ಎಂದರು.

ಶಿರಸ್ತೇದಾರ ಸುರೇಶ ಮ್ಯಾಗೇರಿ, ತಾಲ್ಲೂಕು ಪಂಚಾಯಿತಿಯ ಶ್ರೀನಿವಾಸ ಪವಾರ, ಸಿಆರ್‌ಪಿ ವಿಜಯಲಕ್ಷ್ಮೀ ನವಲಿ, ಸಿಡಿಪಿಓ ಎಸ್.ಎನ್.ಹಿರೇಮಠ, ಪ್ರಾಚಾರ್ಯ ವ್ಹಿ.ಜಿ.ಹೂನಳ್ಳಿ, ಸಿದ್ಧೇಶ್ವರ ಸ್ವಾಮೀಜಿ ಶಿಕ್ಷಣಸಂಸ್ಥೆಯ ಎ.ಕೆ. ಆನಂದ, ಮಹಿಳಾ ಪಿಎಸ್‌ಐ ಎಸ್.ಬಿ.ನಡುವಿನಕೇರಿ, ಶಾಂತಾ ಕಸ್ತೂರಿ, ವ್ಹಿ.ವಾಯ್.ಹಳ್ಳಿ, ಆರ್. ಆರ್.ಕೋರಿ, ಆರ್.ಜಿ.ಕೋಟಿನ್, ಪಿ.ಸಿ.ತಳಕೇರಿ, ಶಿವಶರಣ ಪೂಜಾರಿ, ನಾನಾಗೌಡ ಸಿದರಡ್ಡಿ, ಮಲ್ಲಿಕಾರ್ಜುನ ದೇವೂರ, ರಾಜಕುಮಾರ ಸಿಂದಗೇರಿ, ಎ.ವ್ಹಿ.ವಡ್ಡೋಡಗಿ, ಸೇರಿದಂತೆ ವಿವಿಧ ಶಾಲೆಗಳ ಮುಖ್ಯಗುರುಗಳು, ಕಾಲೇಜು ಸಿಬ್ಬಂದಿ ಹಾಗೂ ಸಾರ್ವಜನಿಕರು ಇದ್ದರು.

# ಸ್ವಯಂ ಉದ್ಯೋಗದಿಂದ ಸ್ವಾವಲಂಬಿಯಾಗಿ :ಪಾಟೀಲ

**ಉದಯರಶ್ಮಿ ನ್ಯೂಸ್**



ವಿಜಯಪುರ: ಯುವಕರು ಸ್ವಯಂ ಉದ್ಯೋಗದ ಮೂಲಕ ಸಾವಲಂಬನೆಯ ಬದುಕನ್ನು ಕಟ್ಟಿಕೊಳ್ಳಬೇಕು. ಸ್ಪರ್ಧಾತ್ಮಕ ಯುಗದಲ್ಲಿ ಉದ್ಯೋಗದಾತರಾಗಿ ತಾವೇ ಹೊರಹೊಮ್ಮಬೇಕು. ಅಂದಾಗ ಮಾತ್ರ ಯುವಸಮೂಹ ಯಶಸ್ವಿಯಾಗಲು ಸಾಧ್ಯ ಎಂದು ಸಮಾಜ ಕಲ್ಯಾಣ ಉಪನಿರ್ದೇಶಕ ಎಸ್. ಎಂ. ಪಾಟೀಲ ಹೇಳಿದರು.

ಬಬಲೇಶ್ವರ ಪಟ್ಟಣದಲ್ಲಿ ಸಚಿನ ಗಿಫ್ಟ್ ಸೆಂಟರ್ ಉದ್ಘಾಟಿಸಿ ಅವರು ಮಾತನಾಡಿ, ಸರ್ಕಾರವು ಉದ್ದಿಮೆ ಶೀಲಾ ಕೌಶಲ್ಯ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳನ್ನು ಹಮ್ಮಿಕೊಂಡಿದೆ. ಅವುಗಳನ್ನು ಸದುಪಯೋಗಪಡಿಸಿಕೊಂಡು ಯುವಕರು ಜೀವನದಲ್ಲಿ ಸಾಧನೆಯನ್ನು ಮಾಡಬೇಕು. ಅಂದಾಗ ಮಾತ್ರ ಭಾರತವು ಅಭಿವೃದ್ಧಿಶೀಲವಾಗಿ ಹೊರಹೊಮ್ಮಲು ಸಾಧ್ಯವಾಗುತ್ತದೆ ಎಂದರು.

ಸಮಾಜ ಕಲ್ಯಾಣ ಅಧಿಕಾರಿಗಳಾದಂತ ಸದಾನಂದ ಬಡಿಗೇರ ವಿಶ್ವದಲ್ಲಿ ಅತಿ ಹೆಚ್ಚು ಯುವ ಸಮೂಹವನ್ನು ಹೊಂದಿರುವ ಭಾರತವು ವೃತ್ತಿಪರ ಕೌಶಲ್ಯವನ್ನು ಹೊಂದುವ ನಿಟ್ಟಿನಲ್ಲಿ ಯುವಕರು ಮುಂದಾಗಬೇಕು.ಸ್ವಯಂ ಉದ್ಯೋಗದ ಮೂಲಕ ಯುವಕರು ತಮ್ಮ ಸಾವಲಂಬನೆಯನ್ನು ಕಂಡಕೊಂಡು ತಂದೆ ತಾಯಿಗೆ ಹೊರಿಯಾಗದೆ ತಮ್ಮ ಬದುಕನ್ನು ತಾವು ರೂಪಿಸಿಕೊಳ್ಳಲು ಸ್ವಯಂ ಉದ್ಯೋಗ ಒಂದೇ ದಾರಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಂತಾಬಾಯಿ ಹಂಚಿನಾಳ ವಸತಿ ನಿಲಯ ಪಾಲಕರು, ಎಸ್ ಎಲ್ ನಾಟಿಕರ ವಸತಿ ನಿಲಯ ಪಾಲಕರು ಬಬಲೇಶ್ವರ, ರೂಪ ಮೆತ್ರಿ, ಬಸವರಾಜ.ಸಾವಳಗಿ , ಗುರುರಾಜ ಕೊಪ್ಪದ್, ಮುಂತಾದ ಅಧಿಕಾರಿಗಳು ಪಾಲ್ಗೊಂಡಿದ್ದರು

ಗಿಫ್ಟ್ ಸೆಂಟರ್ ಮಾಲೀಕ ಸುನಿಲ್ ಕಾಂಬಳೆ, ಸಚಿನ್ ಕಾಂಬಳೆ, ಪ್ರೊ ಶಹಣೂರ್ ಗಾಡೆಕಾರ, ರಮೇಶ. ಮುದ್ದೇಬಿಹಾಳ ಸಂತೋಷ, ಕುಮಾರ್ ಮಾದರ, ಸಂತೋಷ್. ಹರಿಜನ್ ಲಕ್ಷ್ಮಣ್ ಕಾಂಬಳೆ, ಶಂಕ್ರಮ್ಮ ಕೆಳಗಿನಮನಿ ಮುಂತಾದವರು ಪಾಲ್ಗೊಂಡಿದ್ದರು.

# ಘೋಣಸಗಿ ತಾಂಡಾ ಶಾಲೆಗೆ ಇಓ ಐನಾಪುರ ಭೇಟಿ-ಪರಿಶೀಲನೆ

**ಉದಯರಶ್ಮಿ ನ್ಯೂಸ್**



ತಿಕೋಟಾ: ತಾಲ್ಲೂಕಿನ ಘೋಣಸಗಿ ತಾಂಡಾ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ತಾಲ್ಲೂಕ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಐನಾಪುರ ಧಿಡೀರ್ ಭೇಟಿ ನೀಡಿ ನರೇಗಾ ಯೋಜನೆಯಡಿ ಮಂಜೂರಾದ ಹೈಟೆಕ್ ಶೌಚಾಲಯದ ಅಪೂರ್ಣ ಕಾಮಗಾರಿ ಶುಕ್ರವಾರ ವೀಕ್ಷಣೆ ಮಾಡಿ ಬೇಗನೆ ಕಾಮಗಾರಿ ಮುಗಿಸುವಂತೆ ಪಿಡಿಓ ಅವರಿಗೆ ಸೂಚಿಸಿದರು.

ಎರಡು ವರ್ಷದ ಹಿಂದೆ ಮಂಜೂರಾದ ಈ ಹೈಟೆಕ್ ಶೌಚಾಲಯದ ಕಾಮಗಾರಿ ಇನ್ನೂ ಮುಗಿದಿಲ್ಲ. ಶಾಲೆಯಲ್ಲಿ ವಿಧ್ಯಾರ್ಥಿಗಳಿಗೆ ಶೌಚಕ್ಕೆ ಹೋಗಲು ತುಂಬಾ ತೊಂದರೆಯಾಗುತ್ತಿದೆ ಬೇಗ ಕಾಮಗಾರಿ ಮುಗಿಸಿ ವಿದ್ಯಾರ್ಥಿಗಳಿಗೆ ಅನೂಕೂಲ ಮಾಡಿ ಕೊಡಬೇಕು ಎಂದು ಹಲವು ಬಾರಿ ವಿನಂತಿಸಿದರೂ ಕಾಮಗಾರಿ ಮಾಡಲು ವಿಳಂಬವಾಗಿದೆ. ಈಗಲಾದರೂ ಬೇಗನೆ ಕಾಮಗಾರಿ ಪೂರ್ಣಗೊಳಿಸಿ ಮಕ್ಕಳಿಗೆ ಅನೂಕೂಲ ಮಾಡಿ ಕೊಡಬೇಕು ಎಂದು ಇಓ ಐನಾಪುರ ಅವರಿಗೆ ಶಾಲಾ ಮುಖ್ಯೋಪಾಧ್ಯಾಯ ಪಿ.ಎಸ್.ಗದ್ಯಾಳ ವಿನಂತಿಸಿದರು.

ವರ್ಗಕೋಣೆಗೆ ಭೇಟಿ: ಶಾಲಾ ವರ್ಗಕೋಣೆಗೆ ಭೇಟಿ ನೀಡಿದ ಅವರು ರಾಷ್ಟ್ರೀಯ ಹಬ್ಬ ಗಣರಾಜ್ಯೋತ್ಸವ ಕಾರ್ಯಕ್ರಮಕ್ಕೆ ಮಕ್ಕಳು ಸಾಂಸ್ಕೃತಿಕ ಕಾರ್ಯಕ್ರಮಗಳ ಪೂರ್ವ ತಯಾರಿ ಮಾಡುತ್ತಿರುವದನ್ನು ವೀಕ್ಷಿಸಿದರು. ವರ್ಗಕೋಣೆಯಲ್ಲಿ ಪ್ರೋಜೆಕ್ಟರ್ ಬಳಸಿ ಮಕ್ಕಳು ನೃತ್ಯ ಕಲಿಯುತ್ತಿರುವದನ್ನು ಕಂಡು ಖುಷಿಪಟ್ಟರು. ನಲಿಕಲಿ ವರ್ಗಕೋಣೆ ವೀಕ್ಷಣೆ ಮಾಡಿದರು. ಶಾಲಾ ಮೈದಾನದಲ್ಲಿ ಮಕ್ಕಳಿಗೆ ಕುಡಿಯುವ ನೀರಿನ ಸಂಗ್ರಹಣೆಗಾಗಿ ಟ್ಯಾಂಕ ಇಲ್ಲದಿರುವದನ್ನು ಗಮನಿಸಿದ ಅವರು ನೀರಿನ ಟ್ಯಾಂಕ್ ನಿರ್ಮಿಸಿ ಕೊಡುವದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಪಿಡಿಓ ಸದಾಶಿವ ಬೋವಿನ್, ಸಂಜೀವ ರಾಠೋಡ, ಶೋಭಕ್ಕ ಶಿಳ್ಳಿನ ಇದ್ದರು.

# ಬಸವಣ್ಣ 'ದೇಶದ ಸಾಂಸ್ಕೃತಿಕ ನಾಯಕ' ಘೋಷಣೆ ಸನ್ನಿಹಿತ

**ಉದಯರಶ್ಮಿ ನ್ಯೂಸ್**



ಆಲಮೇಲ: 12ನೇ ಶತಮಾನದ ಮಹಾನ್ ಶರಣ, ಜಗಜ್ಯೋತಿ ಅಣ್ಣ ಬಸವಣ್ಣನವರನ್ನು ಕರ್ನಾಟಕದ ಸಂಸ್ಕೃತಿಕ ನಾಯಕರನ್ನಾಗಿ ಘೋಷಣೆ ಮಾಡಿದ್ದು, ಮುಂಬರುವ ದಿನಗಳಲ್ಲಿ ಬಸವಣ್ಣನವರ ಆಶಯದಂತೆ ಸಮಾನತೆ ಕಾಲವು ಆದಷ್ಟು ಬೇಗ ಬರಲಿ ಎಂದು ವಿರಕ್ತಮಠದ ಜಗದೇವ ಮಲ್ಲಿಬೊಮ್ಮಯ್ಯ ಮಹಾಸ್ವಾಮಿಜಿ ಹೇಳಿದರು.

ಶುಕ್ರವಾರ ಪಟ್ಟಣದ ಬಸವೇಶ್ವರ ವೃತ್ತದಲ್ಲಿ ರಾಜ್ಯ ಸರ್ಕಾರ ಬಸವಣ್ಣನವರನ್ನು ಕರ್ನಾಟಕದ ಸಂಸ್ಕೃತಿಕ ನಾಯಕನನ್ನಾಗಿ ಮಾಡಿರುವ ನಿಮಿತ್ಯ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಬಸವಣ್ಣನವರು 12ನೇ ಶತಮಾನದಲ್ಲಿ ಮಹಾನ್ ಶರಣರಾದಂತವರು. ಅವರು ಇಂದು ಜಗತ್ತಿಗೆ ವಿಶ್ವಗುರುವಾಗಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಬಸವಣ್ಣನವರನ್ನು ಕರ್ನಾಟಕದ ಸಂಸ್ಕೃತಿಕ ನಾಯಕನ್ನಾಗಿ ಮಾಡಿರುವುದು ರಾಜ್ಯದ ಜನತೆಗೆ, ಶರಣರಿಗೆ ಹೆಮ್ಮೆಯ ವಿಷಯವಾಗಿದೆ. ಬಸವಣ್ಣನವರ ಆಶಯಂತೆ ಮುಂಬರುವ ದಿನಗಳಲ್ಲಿ ಸಮಾನತೆಯ ಸಾರುವ ಕೆಲಸ ಆಗಬೇಕು. ಮುಂಬರುವ ದಿನಗಳಲ್ಲಿ ಕರ್ನಾಟಕದ ಜನರು ನಾವು ಲಿಂಗಾಯತ ಧರ್ಮದವರು ಎಂದು ನಮೂದಿಸಬೇಕು ಎಂದು ಕರೆ ನೀಡಿದರು.

ಪ್ರದಾನ ಮಂತ್ರಿ ನರೇಂದ್ರ ಮೋದಿ ಅವರು ಬಸವಣ್ಣವರ ಬಗ್ಗೆ ಆಳವಾಗಿ ಅಧ್ಯಯನ ಮಾಡುತ್ತಿದ್ದಾರೆ ಹಿಂದಿನ ಯಾವ ಪ್ರಧಾನಿಯೂ ಮಾಡದಂತ ಕೆಲಸ ಮಾಡುತ್ತಿದ್ದಾರೆ. ಬಸವಣ್ಣನವರ ಬಗ್ಗೆ ಎಷ್ಟೊಂದು ಅಭಿಮಾನ ಇಟ್ಟುಕೊಂಡಿದ್ದಾರೆ, ಬಸವಣ್ಣನವರ ಬಗ್ಗೆ ಅಧ್ಯಯನ ಮಾಡುತ್ತಿರುವ ಪ್ರಧಾನಿ ಮೋದಿ ಬಗ್ಗೆ ಎಷ್ಟು ಹೊಗಳಿದರೂ ಸಾಲದು ಎಂದು ಅವರ ಕಾರ್ಯಗಳ ಬಗ್ಗೆ ಹೊಗಳಿದರು.

ಬಸವ ಕೇಂದ್ರದ ಅಧ್ಯಕ್ಷ ನಾನಾಗೌಡ ಪಾಟೀಲ ಮಾತನಾಡಿ, ಕರ್ನಾಟಕ ವಿಜಯಪುರ ಜಿಲ್ಲೆಯ ಬಸವಣ್ಣನವರು ವಿಶ್ವ ಗುರುವಾಗಿದ್ದಾರೆ. ಸಧ್ಯ ರಾಜ್ಯ ಸರ್ಕಾರ ಕರ್ನಾಟಕದ ಸಂಸ್ಕೃತಿಕ ನಾಯಕನಾಗಿ ಘೋಷಿಸಿರುವುದು ಸಂತೋಷಗೊಳಿಸಿದೆ. ಮುಂದೆ ದೇಶದ ಸಂಸ್ಕೃತಿಕ ನಾಯಕ ಎಂದು ಕೇಂದ್ರ ಸರ್ಕಾರವೇ ಘೋಷಣೆ ಮಾಡುವಂತ ಸಮಯ ಬರುತ್ತದೆ ಎಂದು ಹೇಳಿದರು.

ಅರ್ಜುಣಗಿ ಹಿರೇಮಠದ ಸಂಗನಬಸವ ಶಿವಾಚಾರ್ಯರು, ಪ.ಪಂ. ಸದಸ್ಯ ಅಶೋಕ ಕೊಳಾರಿ, ಸೋಮನಾಥ ಮೇಲಿನಮನಿ, ಪ್ರಶಾಂತ ನಾಶಿ, ಪಿ.ಟಿ. ಪಾಟೀಲ, ಮಲ್ಲಿಕಾರ್ಜುನ ಅಚಲೇರಿ, ಯಲ್ಲಪ್ಪ ಬುರಡ, ಶಶಿಧರ ಗಣಿಯಾರ, ಅಪ್ಪುಗೌಡ ಪಾಟೀಲ, ಅಶೋಕ ಸದ್ಲಾಪುರ, ಬಸವರಾಜ ತೆಲ್ಲೂರ, ಬಾಬು ಕೊತಂಬರಿ, ವಾಹಬ ಸುಂಬಡ, ದಯಾನಂದ ನಾರಯಣಕರ, ಗುರು ಹಡಪದ, ನಜೀರ ಅಲಗೂರ ಮುಂತಾದವರು ಇದ್ದರು.

# ಜ.22-23ರಂದು ಮೆಗಾ ಮಾರುಕಟ್ಟೆ ಮಳಿಗೆಗಳ ಹರಾಜು

**ಉದಯರಶ್ಮಿ ನ್ಯೂಸ್**



ಇಂಡಿ: ಪಟ್ಟಣದ ಮಧ್ಯ ಭಾಗದಲ್ಲಿ ಪಾಳುಬಿದ್ದಿದ್ದ ಜಾಗವನ್ನು ಗುರುತಿಸಿ, ಅದನ್ನು ಸದುಪಯೋಗ ಮಾಡಿಕೊಂಡು 30 ಕೋಟಿ ರೂ,ಗಳ ವೆಚ್ಚದಲ್ಲಿ 246 ವ್ಯಾಪಾರಿ ಮಳಿಗೆಗಳುಳ್ಳ ಮೆಗಾ ಮಾರುಕಟ್ಟೆ ನಿರ್ಮಿಸಿದ್ದು, ಅವುಗಳಲ್ಲಿ ಈಗಾಗಲೇ 100 ಮಳಿಗೆಗಳು ವ್ಯಾಪಾರಕ್ಕೆ ಸಿದ್ದವಾಗಿವೆ. ಅವುಗಳನ್ನು ಬಹಿರಂಗ ಹರಾಜು ಮಾಡಿ ಪುರಸಭೆಗೆ ಆದಾಯ ಮಾಡಿಕೊಡಬೇಕೆಂದು ಹರಾಜು ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. ಅದಕ್ಕೆ ಪುರಸಭೆಯ ಸದಸ್ಯರು, ಸಾರ್ವಜನಿಕರು ಸಹಕಾರ ನೀಡಬೇಕೆಂದು ಶಾಸಕ ಯಶವಂತರಾಯಗೌಡ ಅವರು ಮನವಿ ಮಾಡಿಕೊಂಡರು.

ಅವರು ಗುರುವಾರ ಮೆಗಾ ಮಾರುಕಟ್ಟೆಯ ಆವರಣದಲ್ಲಿ ಏರ್ಪಡಿಸಿದ್ದ ಸಾರ್ವಜನಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮೆಗಾ ಮಾರುಕಟ್ಟೆಗೆ ಶಾಸಕರ ಅನುದಾನದಲ್ಲಿ 8 ಕೋಟಿ ನೀಡಲಾಗಿದೆ. ಇನ್ನುಳಿದ ಹಣವನ್ನು ಸರ್ಕಾರದ ವಿವಿಧ ಸಂಸ್ಥೆಗಳಿಂದ ಸಾಲ ಪಡೆದುಕೊಳ್ಳಲಾಗಿದೆ. ಆ ಸಾಲವನ್ನು ಪುರಸಭೆ ಸಕಾಲದಲ್ಲಿ ತೀರಿಸುವ ಉದ್ದೇಶದಿಂದ ಸರ್ಕಾರಿ ನಿಯಮಾನುಸಾರ ಸಿದ್ದಗೊಂಡಿರುವ ಮೆಗಾ ಮಾರುಕಟ್ಟೆಯ ಮಳಿಗೆಗಳನ್ನು ಹರಾಜು ಮಾಡಲಾಗುತ್ತಿದೆ. ಇದರಲ್ಲಿ ಯಾವುದೇ ದುರುದ್ದೇಶವಿಲ್ಲ ಎಂದರು.


ಈ ಸಂದರ್ಭದಲ್ಲಿ ಪುರಸಭೆಯ ಸದಸ್ಯರಾದ ಅನೀಲಗೌಡ ಬಿರಾದಾರ ಮಾತನಾಡಿ, ಮುಂಬರುವ ದಿನಾಂಕ 22 ಮತ್ತು 23 ರಂದು ನಡೆಯುವ ಮೆಗಾ ಮಾರುಕಟ್ಟೆಯ ಮಳಿಗೆಗಳ ಹರಾಜಿಗೆ ಗ್ರೀನ್ ಸಿಗ್ನಲ್ ನೀಡಿದರು.

ಪುರಸಭೆಯ ಮಾಜಿ ಅಧ್ಯಕ್ಷ ದೇವೇಂದ್ರ ಕುಂಬಾರ, ದಲಿತ ಸಮುದಾಯದ ಮುಖಂಡ ಪ್ರಶಾಂತ ಕಾಳೆ, ರಾಜಕೀಯ ಮುಖಂಡರಾದ ಜಗದೀಶ ಕ್ಷತ್ರಿ, ಜಟ್ಟೆಪ್ಪ ರವಳಿ ಸೇರಿದಂತೆ ಇನ್ನಿತರ ಪುರಸಭೆಯ ಸದಸ್ಯರು ಮಾತನಾಡಿದರು.

ಕಂದಾಯ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ ಮಾತನಾಡಿ, ಜನೇವರಿ 22 ಮತ್ತು 23 ರಂದು ಜಿಲ್ಲಾಧಿಕಾರಿಗಳ ಮಾರ್ಗಸೂಚಿಂಯಂತೆ ಮೆಗಾ ಮಾರುಕಟ್ಟೆಯ 100 ಮಳಿಗೆಗಳನ್ನು ಬಹಿರಂಗ ಹರಾಜು ಮಾಡಲಾಗುತ್ತಿದೆ. ಪುರಸಭೆಯ ಸದಸ್ಯರು, ಸಾರ್ವಜನಿಕರು ಸಹಕಾರ ನೀಡಬೇಕೆಂದು ಮನವಿ ಮಾಡಿದರು. ತಹಶೀಲ್ದಾರ ಬಿ.ಎಸ್.ಕಡಕಬಾವಿ, ಪುರಸಭೆಯ ಸದಸ್ಯರು ಉಪಸ್ಥಿತರಿದ್ದರು.

# ರೇಲ್ವೆ ಕೆಳಸೇತುವೆ ಕಾಮಗಾರಿ ಪೂರ್ಣಗೊಳಿಸಿ :ಸಂಸದ ಜಿಗಜಿಣಗಿ

**ಉದಯರಶ್ಮಿ ನ್ಯೂಸ್**



ವಿಜಯಪುರ: ಇಬ್ರಾಹಿಂಪೂರ ರೇಲ್ವೆ ಸ್ಟೇಶನ್ ಹತ್ತಿರ ಸಂತೋಷ ಮಾತಾ ಜಲನಗರ ಮತ್ತು ಸಾಯಿಪಾಕ್ ರಸ್ತೆಗಳ ಜೋಡಣೆಗಾಗಿ ರೇಲ್ವೆ ಕೆಳ ಸೇತುವೆ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಿ ಅನುಕೂಲಕ ಕಲ್ಪಿಸುವಂತೆ ಸಂಸದ ರಮೇಶ ಜಿಗಜಿಣಗಿ ಅವರು ರೇಲ್ವೆ ಇಲಾಖೆ ಹುಬ್ಬಳ್ಳಿ ಜನರಲ್ ಮ್ಯಾನೇಜರ್ ಅವರಿಗೆ ಪತ್ರ ಬರೆದಿದ್ದಾರೆ.

ಸಂಸದರು ರೇಲ್ವೆ ಮ್ಯಾನೇಜರ್ ಅವರಿಗೆ ಪತ್ರ ಬರೆದು, ಇಬ್ರಾಹಿಂಪೂರ ಹತ್ತಿರದ ರೇಲ್ವೆ ಕೆಳ ಸೇತುವೆ ಕಾಮಗಾರಿ ಪೂರ್ಣಗೊಳ್ಳದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಮಳೆಗಾಲದಲ್ಲಿ ಕೆಳಸೇತುವೆಗೆ ಮಳೆ ನೀರು ಸುತ್ತುವರೆಯುವ ಸಂಭವವಿರುವುದರಿಂದ ಸದರಿ ನೀರು ನಿಲ್ಲದಂತೆ ಮಹಾನಗರ ಪಾಲಿಕೆಯಿಂದ ಕಾಮಗಾರಿ ಕೈಗೊಳ್ಳುವುದಾಗಿ ತಮ್ಮ ಪತ್ರದಲ್ಲಿ ತಿಳಿಸಿದ ಸಂಸದರು, ರೇಲ್ವೆ ಅಧಿಕಾರಿಗಳು ಕೂಡಲೇ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಕೆಳಸೇತುವೆ ಕಾಮಗಾರಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವಂತೆ ಅವರು ಮನವಿ ಮಾಡಿಕೊಂಡಿದ್ದಾರೆ.

# ವೇಮನರ ಸಂದೇಶಗಳು ಆದರ್ಶಪ್ರಾಯ :ಬಿರಾದಾರ

ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ಇಡೀ ಸಮಾಜಕ್ಕೆ ತನ್ನದೇಯಾದ ಅತ್ಯಮೂಲ್ಯವಾದ ಸಂದೇಶಗಳನ್ನು ನೀಡಿದ ವೇಮನರ ಆದರ್ಶಗಳು ಇಂದಿನ ಪೀಳಿಗೆಗೆ ಆದ-ರ್ಶಪ್ರಾಯವಾಗಿವೆ ಎಂದು ಕಸಾಪ ತಾಲ್ಲೂಕು ಅಧ್ಯಕ್ಷ ಜಿ.ಪಿ.ಬಿರಾದಾರ ಹೇಳಿದರು.

ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಶುಕ್ರವಾರ ಜರುಗಿದ ವೇಮನರ ಜಯಂತಿ ಆಚರಣೆಯಲ್ಲಿ ಪಾಲ್ಗೊಂಡು ಮಾತನಾಡಿದರು. ವೇಮನರು ತನ್ನನ್ನು ತಾನು ತಿದ್ದಿಕೊಂಡು ಮಹಾಯೋಗಿಯಾಗಿ ಬೆಳೆದರು ಎಂದರು.

ಬಸವಶರಣ ಸಂಗಮ ಸೇವಾ ಸಮಿತಿ ಅಧ್ಯಕ್ಷ ಸಂಗಪ್ಪಣ್ಣ ತಡವಲ್ ಮಾತನಾಡಿ, ವೇಮನರ ಬಾಲ್ಯ, ಸಮಾಜ ಅವರನ್ನು ಕಂಡ ರೀತಿ, ಮುಂದೆ ಅವರು ಬದಲಾಗಿ ಸಮಾಜಕ್ಕೆ ನೀಡಿದ ದಿವ್ಯಸಂದೇಶಗಳ ಕುರಿತು ಮಾಹಿತಿ ನೀಡಿದರು.



ಶಿಕ್ಷಕ ಪ್ರಲ್ಹಾದ್ ಕುಲಕರ್ಣಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಬಸವಣ್ಣನವರನ್ನು ರಾಜ್ಯದ ಸಾಂಸ್ಕೃತಿಕ ರಾಯಭಾರಿಯನ್ನಾಗಿ ಮಾಡಿದ ಸರ್ಕಾರದ ನಿಲುವನ್ನು ಶ್ಲಾಘಿಸಿ, ಧನ್ಯವಾದ ಸಲ್ಲಿಸಲಾಯಿತು.

ವಚನ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಜೆ.ಆರ್.ಬಿರಾದಾರ, ಶಿಕ್ಷಕರ ಸಂಘದ ತಾಲ್ಲೂಕು ಅಧ್ಯಕ್ಷ ಎ.ಎಚ್.ವಾಲೀಕಾರ, ಮುಖ್ಯಗುರು ಪಿ.ಸಿ.ತಳಕೇರಿ, ಉಪನ್ಯಾಸಕ ಅಕ್ರಮ್ ಪಾಶಾ, ಕೆ.ಎಮ್.ನಂದಿ, ಪ್ರಕಾಶ ಪೂಜಾರಿ, ಎಸ್.ಜಿ.ತಾವರಖೇಡ, ಗೊಲ್ಲಾಳ ಬಿರಾದಾರ, ಬಸವರಾಜ ಬಡಿಗೇರ, ಕೆ.ಜಿ.ಪವಾರ ಸೇ-ರಿದಂತೆ ಸರ್ಕಾರಿ ಪದವಿ ಕಾಲೇಜಿನ ವಿದ್ಯಾರ್ಥಿಗಳು ಇದ್ದರು.

# ಬಸವನಬಾಗೇವಾಡಿ: ರಾಮತಾರಕ ಹೋಮ ಸಂಪನ್ನ

ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಸಮಸ್ತ ಭಾರತೀಯರಿಗೆ ಅಯೋಧ್ಯ ಭವ್ಯ ಶ್ರೀರಾಮಮಂದಿರದಲ್ಲಿ ಶ್ರೀರಾಮನ ಮೂರ್ತಿ ಪ್ರಾಣ ಪ್ರತಿಷ್ಠಾನ ನಡೆಯುತ್ತಿರುವ ಸಂಗತಿ ಬಹಳ ಸಂತಸ, ಸಂಭ್ರಮ ತಂದುಕೊಟ್ಟಿದೆ. ಬಹಳ ದಿನಗಳ ಕನಸು ನನಸಾಗುತ್ತಿದೆ. ಇಡೀ ದೇಶವೇ ಸಂಭ್ರಮ ಪಡುತ್ತಿದೆ ಎಂದು ಹಿರೇಮಠದ ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ ಹೇಳಿದರು.



ಪಟ್ಟಣದ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಬಜರಂಗದಳ, ಮಾತೃಶಕ್ತಿ ಹಾಗೂ ದುರ್ಗಾವಾಹಿನಿಯ ಸಹಯೋಗದಲ್ಲಿ ರಾಮ ಜನ್ಮಭೂಮಿ ಅಯೋಧ್ಯೆಯಲ್ಲಿ ಜ.22 ರಂದು ನಡೆಯುತ್ತಿರುವ ಶ್ರೀರಾಮ ದೇವರ ಮೂರ್ತಿ ಪ್ರತಿಷ್ಠಾಪನೆಯಂಗವಾಗಿ ಶುಕ್ರವಾರ ಹಮ್ಮಿಕೊಂಡಿದ್ದ ರಾಮತಾರಕ ಹೋಮ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಅಯೋಧ್ಯೆಯಲ್ಲಿ ಶ್ರೀರಾಮನ ಮಂದಿರ ಬಹು ವರ್ಷಗಳ ಹಿಂದೆ ನಿರ್ಮಾಣವಾಗಬೇಕಿತ್ತು. ಕೆಲವರ ಕಾರಣದಿಂದಾಗಿ ಈ ಕಾರ್ಯ ನೆರವೇರಿರಲಿಲ್ಲ. ಇದೀಗ ಕಾನೂನು ಬದ್ಧವಾಗಿ ನಿರ್ಮಾಣ ಮಾಡಿದ್ದು ಸಂತೋಷದಾಯಕ ಸಂಗತಿ. ಈ ಮೊದಲು ಎಲ್ಲೆಡೆ ಬನಾಯೆಂಗೇ ಮಂದಿರ ಹಾಡು ಹಾಕಲಾಗುತ್ತಿತ್ತು. ಮುಂದಿನ ದಿನಗಳಲ್ಲಿ ಇದರ ಬದಲು ಬನ್ನಗಯಾ ಮಂದಿರ ಎಂಬ ಹಾಡು ಹಾಕಬೇಕಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಜ.22 ರಂದು ಶ್ರೀರಾಮ ಭಾವಚಿತ್ರ ಪೂಜೆ ಮಾಡುವ ಜೊತೆಗೆ ದೀಪ ಬೆಳಗಿಸಬೇಕೆಂದು ಕರೆ ನೀಡಿದ್ದಾರೆ. ಅವರ ಕರೆಯನ್ನು ಎಲ್ಲರೂ ಪಾಲಿಸುವ ಮೂಲಕ ಶ್ರೀರಾಮನಿಗೆ ನಮನ ಸಲ್ಲಿಸಬೇಕೆಂದರು.

ರಾಜ್ಯ ಸರ್ಕಾರವು ಬಸವೇಶ್ವರರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿದ್ದು ಬಸವ ಭಕ್ತರಿಗೆ ಸಂತೋಷ ತಂದಿದೆ. ಹೋಮ-ಹವನ ಮಾಡುವುದು ಭಾರತೀಯ ವಿಶಿಷ್ಠ ಸಂಪ್ರದಾಯ. ಹೋಮದಲ್ಲಿ ವನಸ್ಪತಿಗಳನ್ನು ಬಳಕೆ ಮಾಡುತ್ತಿರುವುದರಿಂದ ದುಷ್ಟ ಶಕ್ತಿ ನಾಶವಾಗುತ್ತದೆ ಎಂದ ಅವರು ರಾಜ್ಯ ಸರ್ಕಾರವು ಬಸವೇಶ್ವರರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿದ್ದು ಬಸವ ಭಕ್ತರಿಗೆ ಸಂತೋಷ ತಂದಿದೆ ಎಂದರು.

ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ, ಬುರಣಾಪೂರ ಯೋಗೇಶ್ವರಿ ಮಾತಾಜಿ, ಮುಖಂಡ ಕಲ್ಲು ಸೊನ್ನದ ಮಾತನಾಡಿದರು.

ರಾಮತಾರಕ ಹೋಮವನ್ನು ಯೋಗೀಶ ಜೈನಿ, ಅಭಿಷೇಕ ಜೈನಿ, ಕೃಪಾಚಾರ್ಯ ಗಲಗಲಿ, ಹರೀಶ ಜೈನಿ, ದೇವದಾಸ ಹುಂಡೇಕರ ಅವರು ನೆರವೇರಿಸಿದರು. ಹೋಮದಲ್ಲಿ 200ಕ್ಕೂ ಹೆಚ್ಚು ದಂಪತಿಗಳು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಇಂಗಳೇಶ್ವರದ ಬೃಂಗೀಶ್ವರ ಶಿವಾಚಾರ್ಯ ಸ್ವಾಮೀಜಿ, ಮಾತೃಶಕ್ತಿಯ ವಿಭಾಗ ಸಂಚಾಲಕಿ ಮಾಯಕ್ಕ ಚೌಧರಿ, ಬಜರಂಗದಳ ವಿಜಯಪುರ ವಿಭಾಗದ ಸಂಯೋಜಕ ಸಂತೋಷ ಹಿರೇಮಠ, ಮಾತೃಶಕ್ತಿ ತಾಲೂಕು ಪ್ರಮುಖ ರೂಪಾ ಜಾಧವ, ಉಪಾಧ್ಯಕ್ಷೆ ವಿದ್ಯಾಶ್ರೀ ಬಡಿಗೇರ, ದುರ್ಗಾವಾಹಿನಿ ತಾಲೂಕು ಸಂಚಾಲಕಿ ಸ್ವಾತಿ ಪಾಟೀಲ, ವಿದ್ಯಾರ್ಥಿ ಪ್ರಮುಖ ಲಕ್ಷ್ಮೀ ವಸ್ತದ, ಅಶೋಕ ಹಾರಿವಾಳ, ಬಸವರಾಜ ಹಾರಿವಾಳ, ವಿವೇಕಾನಂದ ಕಲ್ಯಾಣಶೆಟ್ಟಿ, ಕೆ. ಗಂಗಾಧರ ಸೇ-ರಿದಂತೆ ಇತರರು ಇದ್ದರು.

ಪದ್ಮರಾಜ ಒಡೆಯರ ಸ್ವಾಗತಿಸಿದರು. ರಾಹುಲ ಜಗತಾಪ ನಿರೂಪಿಸಿದರು.

ತಮ್ಮಣ್ಣ ಬಡಿಗೇರ ಶಾಂತಿ ಮಂತ್ರ, ಜಯಘೋಷದೊಂದಿಗೆ ವಂದಿಸಿದರು.

ಕಾರ್ಯಕ್ರಮಕ್ಕೂ ಮುನ್ನ ಬಸವಜನ್ಮ ಸ್ಮಾರಕದ ಮುಂಭಾಗದಿಂದ ಕುಂಭಮೇಳದ ಮೆರವಣಿಗೆಯೊಂದಿಗೆ ದಂಪತಿಗಳು ಪಟ್ಟಣದ ಪ್ರಮುಖ ಬೀದಿಗಳ ಮೂಲಕ ಬಸವೇಶ್ವರ ದೇವಸ್ಥಾನಕ್ಕೆ ಆಗಮಿಸಿದರು. ಮೆರವಣಿಗೆಯಲ್ಲಿ ಶ್ರೀರಾಮನ ಭಾವಚಿತ್ರ, ಹನುಮಂತ, ಶಿವಾಜಿ ಪ್ರತಿಮೆಗಳು ಗಮನ ಸೆಳೆದವು.

ಇಂದು ಜರುಗಿದ ರಾಮತಾರಕ ಹೋಮ ಕಾರ್ಯಕ್ರಮದಲ್ಲಿ ಎಲ್ಲಿಯೂ ವಿಶ್ವಗುರು ಬಸವೇಶ್ವರರ ಭಾವಚಿತ್ರ ಇರಲಿಲ್ಲ. ಬಸವೇಶ್ವರರ ಭಾವಚಿತ್ರ ಇರಬೇಕಿತ್ತು ಎಂದು ಮುಖಂಡ ಶೇಖರ ಗೊಳಸಂಗಿ ಹೇಳಿದರು.

## ಜಾನಪದ ಸಮಾವೇಶ ಉದ್ಘಾಟಿಸಿದ ಬಿಜೆಪಿ ಜಿಲ್ಲಾಧ್ಯಕ್ಷ ಆರ್.ಎಸ್.ಪಾಟೀಲ ಅಭಿಮತ

# ಜಾನಪದ ಮಾನವೀಯ ಮೌಲ್ಯಗಳ ಆಗರ

ಉದಯರಶ್ಮಿ ನ್ಯೂಸ್

ತಾಳಿಕೋಟೆ: ಎಲ್ಲ ಧರ್ಮ - ಜಾತಿಗಳ ತತ್ವಸಾರ ಜಾನಪದ ಕುಲುಮೆಯಲ್ಲಿಯೇ ಉದಯವಾಗಿವೆ. ಮಾನವೀಯ ಮೌಲ್ಯಗಳಾದ ಪ್ರೀತಿ, ಕರುಣೆ, ಸಮಾನತೆ, ಕಾಯಕ, ದಾಸೋಹದಂತಹ ಸಾರ್ವತ್ರಿಕ ಚಿಂತನೆಗಳು ಜಾನಪದ ಸಂಸ್ಕೃತಿಯ ಪ್ರತಿಬಿಂಬಗಳಾಗಿವೆ ಎಂದು ವಿಜಯಪುರ ಜಿಲ್ಲಾ ಬಿಜೆಪಿ ಜಿಲ್ಲಾಧ್ಯಕ್ಷ ಆರ್ ಎಸ್ ಪಾಟೀಲ (ಕೂಚಬಾಳ) ಅಭಿಪ್ರಾಯಪಟ್ಟರು.



ತಾಲೂಕಿನ ಮೂಕಿಹಾಳದ ದರ್ಗಾದಲ್ಲಿ ಕನ್ನಡ ಜಾನಪದ ಪರಿಷತ್ ಜಿಲ್ಲಾ ಘಟಕ ವಿಜಯಪುರ ಮತ್ತು ಹಜರತ್ ಲಾಡ್ಲೆ ಮಶ್ಯಾಕ ದರ್ಗಾ ಕಮಿಟಿ ಸಹಯೋಗದಲ್ಲಿ ಹಜರತ್ ಲಾಡ್ಲೆ ಮಶ್ಯಾಕ ಉರುಸಿನ ಪ್ರಯುಕ್ತ ಹಮ್ಮಿಕೊಂಡಿದ್ದ "ಜಿಲ್ಲಾ ಮಟ್ಟದ ಜಾನಪದ ಸಮಾವೇಶ" ಉದ್ಘಾಟಿಸಿ ಅವರು ಮಾತನಾಡಿದರು.

ದರ್ಗಾ, ದೇವಾಲಯ, ಮಠ-ಮಂದಿರಗಳು ಭಾವೈಕ್ಯತೆ ಸಾರುತ್ತಾ ಆದರ್ಶ ಮೆರೆಯುತ್ತಿವೆ. ಇಂಥಹ ನೆಲದಲ್ಲಿ ಕಲಾವಿದರು, ಸಾಹಿತಿಗಳು ಮತ್ತು ಸಂಘಟಕರು ಸಮಾವೇಶಗೊಂಡಿರುವುದು ಸಾರ್ಥ-ಕವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ವಿಜಯಪುರ ಜಿ ಪಂ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ, ಬಾಳನಗೌಡ ಪಾಟೀಲರು ಜಾನಪದ ಪರಿಷತ್ ಅಧ್ಯಕ್ಷರಾದ ಮೇಲೆ ಜಿಲ್ಲೆಯ ಪ್ರತಿಯೊಂದು ಗ್ರಾಮದಲ್ಲಿ ಜಾನಪದ ಜಾಗೃತಿ ಮೂಡಿಸುತ್ತ ಸಮ್ಮೇಳನ, ಸಮಾವೇಶ, ಉತ್ಸವ ಮಾಡುತ್ತಾ ಜಾನಪದ ಕಲಾವಿದರನ್ನು ಬೆಳೆಸುತ್ತಾ ಜಾನಪದ ಸಾಹಿತ್ಯ ಮತ್ತು ಕಲೆ ಉಳಿಸುತ್ತಿದ್ದಾರೆ ಎಂದು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕನ್ನಡ ಜಾನಪದ ಪರಿಷತ್ ವಿಜಯಪುರ ಜಿಲ್ಲಾಧ್ಯಕ್ಷ ಬಾಳನಗೌಡ ಪಾಟೀಲ (ಪಡಗಾನೂರ), ಜಿಲ್ಲೆಯಲ್ಲಿ ಕ ಜಾ ಪ ವತಿಯಿಂದ 200 ಕ್ಕೂ ಹೆಚ್ಚು ಕಾರ್ಯಕ್ರಮ ನಡೆಸಿ ಜಾನಪದ ಕಲಾವಿದರ ಮಾಶಾಸನ, ವಸ್ತ್ರದಾನ, ಗುರುತಿನ ಪತ್ರ, ಪ್ರಶಸ್ತಿ, ಸನ್ಮಾನ ಮುಂತಾದ ಕೆಲಸ ಮಾಡುತ್ತ ಜಾನಪದ ಸಂಸ್ಕೃತಿ ಉಳಿಸುವ ಕೆಲಸದ ಕುರಿತು ತಿಳಿಸಿದರು.

ಸಾನಿಧ್ಯ ವಹಿಸಿದ್ದ ಹಿರೂರ ಜಯಸಿದ್ದೇಶ್ವರ ಸ್ವಾಮಿಗಳು, ವಚನ ಸಾಹಿತ್ಯ ಪರಿಷತ್ ತಾಲೂಕಾಧ್ಯಕ್ಷ ಮಹಾಂತೇಶ ಮುರಾಳ, ಶಿಕ್ಷಕರಾದ ಎ ಎಂ ಮೂಲಿಮನಿ, ಮಾತನಾಡಿದರು.

ವೇದಿಕೆಯಲ್ಲಿ ದರ್ಗಾ ಕಮೀಟಿ ಅಧ್ಯಕ್ಷ ಕೆ ಹೆಚ್ ಪಾಟೀಲ, ಕಜಾಪ ಅಧ್ಯಕ್ಷರುಗಳಾದ ಎ ಆರ್ ಮುಲ್ಲಾ (ಮುದ್ದೇಬಿಹಾಳ) ದೇವೇಂದ್ರ ಗೋನಾಳ ( ಬಸವನಬಾಗೇವಾಡಿ) ಗಿರೀಶ ಕಂಬಾರ (ಆಲಮೇಲ) ಕಜಾಪ ಜಿಲ್ಲಾ ಸಂಚಾಲಕ ಪ್ರೊ ಗುರುರಾಜ ಹಳ್ಳೂರ, ಸದಸ್ಯ ಮೌಲಾಸಾಹೇಬ ಜಹಾಗೀರದಾರ, ಶಿಕ್ಷಕರಾದ ಶ್ರೀಮತಿ ಎಸ್ ಎಚ್ ಪಾಟೀಲ, ನಾಗರಾಜ ನಾಡಗೌಡ, ಹಿರಿಯರಾದ ಬಿ ಎಸ್ ಇಸಾಂಪೂರ, ಇದ್ದರು.

ಕಜಾಪ ತಾಲೂಕಾಧ್ಯಕ್ಷ ಸಿದ್ದನಗೌಡ ಕಾಶಿನಕುಂಟಿ ಸ್ವಾಗತಿಸಿದರು. ಶಿಕ್ಷಕರಾದ ಆರ್ ಎಸ್ ವಾಲಿಕಾರ ನಿರೂಪಿಸಿದರು. ವಿಶ್ವನಾಥ ಮಠ ವಂದಿಸಿದರು.

ಕಾರ್ಯಕ್ರಮದಲ್ಲಿ 30 ಜನ ಹಿರಿಯ ಜಾನಪದ ಕಲಾವಿದರನ್ನು ಸನ್ಮಾನಿಸಿ ಗೌರವಿಸಲಾಯಿತು. ಹಲಗೆಮಜಲು, ವೀರಗಾಸೆ, ಜೋಗತಿ ನೃತ್ಯ, ಚೌಡಿಕೆ ಮೇಳ, ಹಂತಿ ಮೇಳ, ತತ್ವದ, ಭಜನೆ ಪದ, ಡೊಳ್ಳಿನಪದ, ಸಂಪ್ರದಾಯ ಪದ, ಸುಡುಗಾಡ ಸಿದ್ಧರಾಟ, ಭರತನಾಟ್ಯ, ರೈತಗೀತೆ ಸೇರಿದಂತೆ 20 ಕಲಾತಂಡಗಳು ಪ್ರದರ್ಶನ ನೀಡಿದವು.

# ಬಸವನಬಾಗೇವಾಡಿ: ವೇಮನ ಜಯಂತಿ ಆಚರಣೆ



ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಪಟ್ಟಣದ ತಹಸೀಲ್ದಾರ ಕಚೇರಿಯ ಸಭಾಂಗಣದಲ್ಲಿ ತಾಲೂಕಾಡಳಿತದಿಂದ ಶುಕ್ರವಾರ ಮಹಾಯೋಗಿ ವೇಮನ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಮಹಾಯೋಗಿ ವೇಮನ ಅವರ ಜಯಂತಿ ಆಚರಿಸಲಾಯಿತು.

ಮಹಾಯೋಗಿ ವೇಮನ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದ ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ ಮಾತನಾಡಿ, ಸಮಾಜದಲ್ಲಿ ಸಾಧನೆ ಮಾಡಿದ ಮಹನೀಯರ ಜಯಂತಿಗಳು ಕೇವಲ ಆಚರಣೆಗೆ ಸೀಮಿತಗೊಳಿಸದೇ ಅವರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ಪಾಲನೆ ಮಾಡುವ ನಿಟ್ಟನಲ್ಲಿ ನಾವು ಉತ್ತಮ ಸಮಾಜವನ್ನು ಕಟ್ಟಬೇಕಾಗಿದೆ ಎಂದರು.

ವಕೀಲ ಎಸ್.ಎಚ್.ಗುರಡ್ಡಿ ಮಾತನಾಡಿ, ಮಹಾಯೋಗಿ ವೇಮನ ಅವರು ತಮ್ಮ ಸಾಹಿತ್ಯ ರಚನೆಗಳ ಮೂಲಕ ಸಮಾಜದ ಕಂದಾಚಾರ, ಮೂಢನಂಬಿಕೆ, ಸೋಗಲಾಡಿತನವನ್ನು ಪ್ರಶ್ನಿಸಿದರು. ಶ್ರೇಷ್ಠ ಮಾನವೀಯ ಮೌಲ್ಯಗಳನ್ನು ಸಾರುವ ಮೂಲಕ ಸಮಾಜಕ್ಕೆ ತಮ್ಮದೇಯಾದ ಕೊಡುಗೆ ನೀಡಿದ್ದಾರೆ. ಮಹಾಯೋಗಿ ವೇಮನ ಅವರು ಲೋಕಜನ ಹರಡಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಭವಾನಿ ಪಾಟೀಲ, ರೇಷ್ಮೆ ಇಲಾಖೆಯ ಎಸ್.ಐ.ಗೋಲಗೊಂಡ, ಖಜಾನೆ ಇಲಾಖೆಯ ಅಧಿಕಾರಿ ಮನೋಜ ಪಾಟೀಲ, ಭೂಮಾಪನ ಇಲಾಖೆಯ ವ್ಯವಸ್ಥಾಪಕ ಕಲಾದಗಿ, ಶಿರಸ್ತೇದಾರ ಬೋರಮ್ಮ ಪೋಲೇಶಿ, ತಹಸೀಲ್ದಾರ ಸಿಬ್ಬಂದಿಗಳಾದ ಮಂಜು ಹಳ್ಳೂರ, ಆರ್.ವಿ.ಘಾಟಗೆ, ನರ್ಮಲಾ ಪೂಜಾರಿ, ಸುರೇಶ ದೇಸಾಯಿ, ಎಸ್.ಎಚ್. ಗುರಡ್ಡಿ, ಎಸ್.ಬಿ.ಅಡ್ನೂಡಗಿ, ಸಿ.ಎಸ್.ಬಿರಾದಾರ, ಬಸವರಾಜ ದೇಸಾಯಿ, ವಿಶ್ವನಾಥ ರೆಡ್ಡಿ, ಸ್ವರೂಪರಾಣಿ ಬಿಂಜಲಬಾವಿ ಇತರರು ಇದ್ದರು.

# ಬಸವನಬಾಗೇವಾಡಿ ತಾಲೂಕು ಆಸ್ಪತ್ರೆಗೆ ಕಾಯಕಲ್ಪ ಪ್ರಶಸ್ತಿ ಗರಿ



ಉದಯರಶ್ಮಿ ನ್ಯೂಸ್

ಬಸವನಬಾಗೇವಾಡಿ: ಪಟ್ಟಣದ ತಾಲೂಕು ಆಸ್ಪತ್ರೆಗೆ ಕೇಂದ್ರ ಸರ್ಕಾರದ 2022 ನೇ ಸಾಲಿನ ಕಾಯಕಲ್ಪ ಪ್ರಶಸ್ತಿಗೆ ಆಯ್ಕೆ ಮಾಡಿದೆ.

ಈ ಪ್ರಶಸ್ತಿಯನ್ನು ವಿಜಯಪುರದಲ್ಲಿ ಬುಧವಾರ ಜರುಗಿದ ಆರೋಗ್ಯ ಇಲಾಖೆಯ ಮಾಸಿಕ ಸಭೆಯಲ್ಲಿ ಡಿಎಚ್‌ಒ ಡಾ.ಬಸವರಾಜ ಹುಬ್ಬಳ್ಳಿ ಅವರು ತಾಲೂಕು ಆಸ್ಪತ್ರೆಯ ಮುಖ್ಯ ಆಡಳಿತ ವೈದ್ಯಾಧಿಕಾರಿ ಡಾ.ಸಾಬೀರ ಪಟೇಲ ಅವರಿಗೆ ಪ್ರದಾನ ಮಾಡಿ, ಆರೋಗ್ಯ ಇಲಾಖೆಯಿಂದ ಸನ್ಮಾನಿಸಲಾಯಿತು.

ಡಿಎಚ್‌ಒ ಹುಬ್ಬಳ್ಳಿ ಮಾತನಾಡಿ, ಕೇಂದ್ರ ಸರ್ಕಾರ ಆಸ್ಪತ್ರೆಯ ಆಂತರಿಕ ಮತ್ತು ಬಾಹ್ಯವಾಗಿ ಸ್ವಚ್ಛತೆ, ಜೈವಿಕ ತ್ಯಾಜ್ಯ ಸಂಸ್ಕರಣಾ ಘಟಕ, ಇನ್ಫೆಕ್ಷನ್ ಕಂಟ್ರೋಲ್, ಪರಿಸರ ಸಂರಕ್ಷಣೆ, ಸಮಯ ಪಾಲನೆ ರೋಗಿಗಳ ಆರೈಕೆ, ಸಿಬ್ಬಂದಿಗಳ ಕಾರ್ಯಕ್ಷಮತೆ ಪರಿಗಣಿಸಿ ರಾಜ್ಯಕ್ಕೆ ಎರಡನೇ ಸ್ಥಾನದ ಕಾಯಕಲ್ಪ ಪ್ರಶಸ್ತಿಗೆ ಕೇಂದ್ರ ಸರ್ಕಾರ ಆಯ್ಕೆ ಮಾಡಿದೆ. 2023 ನೇ ಸಾಲಿನಲ್ಲಿ ರಾಜ್ಯ ಸರ್ಕಾರ ತಾಲೂಕು ಆಸ್ಪತ್ರೆಯನ್ನು ಈ ಮಾನದಂಡಗಳ ಅನ್ವಯ ರಾಜ್ಯಕ್ಕೆ ಪ್ರಥಮ ಸ್ಥಾನದ ಕಾಯಕಲ್ಪ ಪ್ರಶಸ್ತಿಗೆ ಆಯ್ಕೆ ಮಾಡಿದೆ. ಮುಂಬರುವ ದಿನಗಳಲ್ಲಿ ರಾಜ್ಯ ಮಟ್ಟದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ರಾಜ್ಯ ಸರ್ಕಾರದ ಕಾಯಕಲ್ಪ ಪ್ರಶಸ್ತಿ ಆಸ್ಪತ್ರೆಗೆ ಪ್ರದಾನವಾಗಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಡಾ.ಗೋಲಗೇರಿ, ಡಾ.ಗುಂಡಬಾವಡಿ, ಡಾ.ಎಸ್.ಎಸ್.ಓತಗೇರಿ, ಡಾ.ಜಿ.ಬಿ.ಬೀಳಗಿ, ಕವಿತಾ ದೊಡಮನಿ, ಡಾ.ಶಾಕೀರ ಪಟೇಲ, ಡಾ.ಸಯ್ಯದ ನಬಿ, ಡಾ.ಬಿ.ಎಂ.ಝಳಕಿ, ಡಾ. ಎಂ.ಪಿ.ಸಿಹಾಸನ, ಡಾ.ಬಿ.ವೈ.ಮುತ್ತತ್ತಿ, ಎ.ಎಂ.ಕೊಣ್ಣೂರ, ಬಿ.ಎಂ.ನ್ಯಾಯೋಡಿ, ಬಸವರಾಜ ಧನ್ಯಾಳ, ಬಿ.ಸಿ.ಪಟ್ಟಣಶೆಟ್ಟಿ, ಸಂಗಮೇಶ ಮೇಲಿನಮನಿ, ಅಣ್ಣಪ್ಪ ಬಿದ್ನಾಳ, ಚಂದ್ರಶೇಖರ ಹದಿಮೂರ, ಮಹಾದೇವಿ ಬೇವನೂರ, ಶಿವಲೀಲಾ ದೊಡಮನಿ, ಅರ್ಚನಾ ನಾಟೀಕಾರ, ವ್ಹಿ.ಎಲ್.ವಡ್ಡರ, ಶ್ವೇತಾ ಚಿನಿವಾಲರ, ಡಿ.ಬಿ.ಕಾಚೂರ, ಸುಜಾತಾ ಕಿಶೋರಿ, ಸಿದ್ದಲಿಂಗಪ್ಪ ಭಾವಿಕಟ್ಟಿ ಇತರರು ಇದ್ದರು.

# ಬಸವಣ್ಣ ಸಾಂಸ್ಕೃತಿಕ ನಾಯಕ ಘೋಷಣೆಗೆ ಸಂಭ್ರಮಾಚರಣೆ



ಉದಯರಶ್ಮಿ ನ್ಯೂಸ್

ಸಿಂದಗಿ: ಜಾತಿ ತಾರತಮ್ಯ, ಡಾಂಭಿಕ ಭಕ್ತಿ ಎಲ್ಲದರ ವಿರುದ್ಧ ತಿರುಗಿ ಬಿದ್ದಿದ್ದ ಬಸವಣ್ಣ, ತಮ್ಮದೇ ಆದ ರೀತಿಯಲ್ಲಿ ದಮನಕ್ಕೊಳಗಾದವರ ಧ್ವನಿಯಾಗಿ ನಿಂತಿದ್ದರು. ಇಷ್ಟಲಿಂಗ ಮೂರ್ತಿಯ ಪರಿಕಲ್ಪನೆಯನ್ನು ನೀಡಿ ದೇವರನ್ನು ಎಲ್ಲರ ಕರಸ್ಥಲಕ್ಕೆ ತಂದರು. ಕಾಯಕವೇ ಕೈಲಾಸ ಎಂದು ಹೇಳಿ, ಎಲ್ಲರಲ್ಲೂ ದುಡಿಯುವ ಛಲ ಹುಟ್ಟು ಹಾಕಿದರು ಎಂದು ಹಿಕ್ಕನಗುತ್ತಿ ಲಿಂಗಾಯತ ಮಹಾಮಠದ ಪ್ರಭುಲಿಂಗ ಶರಣರು ಹೇಳಿದರು.

ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಶುಕ್ರವಾರ ಜರುಗಿದ ಸಂಭ್ರಮಾಚರಣೆಯಲ್ಲಿ ಮಾತನಾಡಿದ ಅವರು, ಅನುಭವ ಮಂಟಪ ಸ್ಥಾಪಿಸಿ, ಅದರಲ್ಲಿ ಎಲ್ಲರೂ ವಿಚಾರ ವಿನಿಮಯ ಮಾಡಲು ವೇದಿಕೆ ಕಲ್ಪಿಸಿದರು. ಕೆಳ ಜಾತಿಗಳಿಂದಲೂ ಬಂದ ಶರಣರು ಇಲ್ಲಿ ತಮ್ಮ ಚಿಂತನೆಗಳನ್ನು ಮಂಡಿಸಿ ಮನುಕುಲಕ್ಕೆ ಆದರ್ಶವಾಗಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಸಿಎಂ ಮನಗೂಳಿ ಕಾಲೇಜಿನ ಪ್ರಾಧ್ಯಾಪಕ ಡಾ.ಅರವಿಂದ ಮನಗೂಳಿ ಮಾತನಾಡಿ, ಕರ್ನಾಟಕದ ಸಾಂಸ್ಕೃತಿಕ ನಾಯಕನನ್ನಾಗಿ ಬಸವಣ್ಣ ಅವರ ಹೆಸರನ್ನು ಘೋಷಣೆ ಮಾಡಿದ್ದು ಶ್ಲಾಘನೀಯ. ಅನುಭವ ಮಂಟಪದ ಮೂಲಕ ಪ್ರಜಾಪ್ರಭುತ್ವದ ಪರಿಕಲ್ಪನೆಯನ್ನು ಭಾರತ ದೇಶದಲ್ಲಿ ಮೊದಲ ಬಾರಿಗೆ ಪರಿಚಯಿಸಿದ ಗುರು ಬಸವಣ್ಣನವರು ಅಸ್ಪೃಶ್ಯತೆ ವಿರುದ್ಧ ಚಳುವಳಿ ರೂಪಿಸಿ ದೀನ, ದಲಿತ, ಶೋಷಿತ ಸಮಾಜದ ಸಮಾನತೆಗೆ ಧ್ವನಿ ಎತ್ತಿದ ಇತಿಹಾಸದ ಮೊದಲ ನಾಯಕ ಎಂದು ಹೇಳಿದರು.

ಈ ವೇಳೆ ಲಿಂಬೆ ಅಭಿವೃದ್ಧಿ ಮಂಡಳಿ ಮಾಜಿ ಅಧ್ಯಕ್ಷ ಅಶೋಕ ಅಲ್ಲಾಪೂರ, ದಸಂಸ ವಿದ್ಯಾರ್ಥಿ ಘಟಕದ ಜಿಲ್ಲಾ ಸಂಚಾಲಕ ವೈ.ಸಿ.ಮಯೂರ, ಹಿರಿಯ ಸಾಹಿತಿ ಡಾ.ಎಂ.ಎಂ.ಪಡಶೆಟ್ಟಿ, ಡಾ.ಚನ್ನಪ್ಪ ಕಟ್ಟಿ, ಗುರು ತಾರಾಪುರ, ಜಗದೀಶ ಕಲಬುರಗಿ, ವಿಶ್ವನಾಥ ಜೋಗುರು, ಆರ್.ಆರ್. ಪಾಟೀಲ, ರಾಷ್ಟ್ರೀಯ ಬಸವದಳ ಅಧ್ಯಕ್ಷ ಮಲ್ಲು ಅರ್ಜುಣಗಿ, ಗುರು ಬಸರಕೋಡ, ಶಿವಕುಮಾರ ಶಿಂಪಿಗೇರ, ನಾನಪ್ಪಗೌಡ ಚನಗೊಂಡ, ಅಣ್ಣಾರಾಯ ಈಳಗೇರ ಸೇರಿದಂತೆ ಬಸವ ದಳದ ಪದಾಧಿಕಾ-ರಿಗಳು, ವಿವಿಧ ಸಂಘಟನೆ ಸದಸ್ಯರು, ಸಾಹಿತಿಗಳು, ಕಾಲೇಜಿನ ವಿದ್ಯಾರ್ಥಿಗಳು ಬಸವ ಅಭಿಮಾನಿಗಳು ಭಕ್ತರು ಪಾಲ್ಗೊಂಡಿದ್ದರು.